ಸಂಪುಟ : 9 ಸಂಚಿಕೆ 273 ಪುಟ : 4 ಬೆಲೆ: 3.00 ಬುಧವಾರ ಡಿಸೆಂಬರ್ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 273 Pages : 4 Price : 3.00 Wednesday December 11 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಬೆಂಗಳೂರನ್ನು ಸಿಂಗಾಪುರ ಮಾಡಬೇಕೆನ್ನುವ ಹಂಬಲ ಎಸ್.ಎಂ.ಕೃಷ್ಣಗಿತ್ತು: ಶಾಸಕ ಜಿ.ಎಸ್. ಪಾಟೀಲ್ ಕಂಬನಿ!



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಂಡ ಮೇರು ವ್ಯಕ್ತಿತ್ವದ ಹಿರಿಯ ರಾಜಕಾರಣಿ ಎಸ್ ಎಂ ಕೃಷ್ಣ ನಮ್ಮನ್ನ ಅಗಲಿದ್ದಾರೆ ಎಂದು ಎಸ್ ಎಂ ಕೃಷ್ಣ ನಿಧನಕ್ಕೆ ರೋಣ ಶಾಸಕ ಜಿಎಸ್ ಪಾಟೀಲ ಸಂತಾಪ ಸೂಚಿಸಿದ್ದಾರೆ.

ಜಿಲ್ಲೆಯ ರೋಣ ಪಟ್ಟಣದಲ್ಲಿ ಮಾತನಾಡಿದ ಅವರು, ಎಸ್ ಎಂಕೆ ಅವರು ರಾಜ್ಯದ ಸಿಎಂ, ಡಿಸಿಎಂ ಆಗಿದ್ದವರು. ಕೇಂದ್ರದ ವಿವಿಧ ಖಾತೆಯ ಸಚಿವರಾಗಿ, ಮಹಾರಾಷ್ಟ್ರ ರಾಜ್ಯಪಾಲರಾಗಿ ದೇಶಕ್ಕೆ ಸೇವೆ ಸಲ್ಲಿಸಿದವರು.

ಅವರ ಕಾಲಾವಧಿಯಲ್ಲಿ ಬೆಂಗಳೂರನ್ನ ಸಿಂಗಾಪುರ ಮಾದರಿಯಲ್ಲಿ ಬೆಳೆಸುವ ಹಂಬಲ ಹೊಂದಿದ್ದರು.

ಬೆಂಗಳೂರನ್ನ ಐಟಿ, ಬಿಟಿ ಹಬ್ ಮಾಡಲು ಯಶಸ್ವಿಯಾಗಿದ್ದಾರೆ. ಅದಲ್ಲದೆ ಬಿಸಿ ಊಟ, ಸ್ತ್ರೀ ಶಕ್ತಿ ಯೋಜನೆ ತಂದಂತವರು ಎಂದು ಜಿ ಎಸ್ ಪಾಟೀಲ ಸ್ಮರಿಸಿದ್ದಾರೆ.

ಇನ್ನೂ ನಮ್ಮ ಕುಟುಂಬದ ಮೇಲೂ ಎಸ್ ಎಂಕೆ ಪ್ರೀತಿ ವಿಶ್ವಾಸ ಇಟ್ಟಿದ್ದರು. ಅವರ ಅಧಿಕಾರಾವಧಿಯಲ್ಲಿ ಸಹೋದರ ವಿ ಎಸ್ ಪಾಟೀಲರನ್ನ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಿಸಿದ್ದರು. ಅವರ ದಕ್ಷ ಆಡಳಿತ ಕಂಡು ಸರ್ಕಾರದ ಮುಖ್ಯ ಕಾರ್ಯದರ್ಶಿಯನ್ನಾಗಿಯೂ ಮಾಡಿದ್ದರು. ಅದಲ್ಲದೆ 2004 ರಲ್ಲಿ ನಮ್ಮ ಕುಟುಂಬದ ಮೂವರು ಸಹೋದರರಿಗೆ ಸ್ಪರ್ಧಿಸಲು ಅವಕಾಶ ಕೊಟ್ಟಿದ್ದರು. ಅವರು ನಮ್ಮ ಜೊತೆ ಇಲ್ಲ.. ಆದ್ರೆ ಅವರು ಮಾಡಿದ ಕೆಲಸ ನಮ್ಮ ಜೊತೆಗಿವೆ ಎಂದು ಭಾವುಕರಾದರು.

## ಮಾಜಿ ಸಿಎಂ ಎಸ್.ಎಂ. ಕೃಷ್ಣ ನಿಧನ ಮಾಜಿ ಸಂಸದ ಆರ್.ಎಸ್. ಪಾಟೀಲ ಸಂತಾಪ

■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ನಿಧನರಾದ ಸುದ್ದಿ ತೀವ್ರ ಆಘಾತ ಹಾಗೂ ತಡೆಯಲಾಗದ ದ್ರಃಖ ತಂದಿದೆ ಎಂದು ಬಾಗಲಕೊಟ ಲೋಕಸಭಾ ಮತಕ್ಷೇತ್ರದ ಆರ್.ಎಸ್. ಪಾಟೀಲ ಕಣ್ಣೀರಾದರು.

ಅವರು ಮಂಗಳವಾರ ಪಟ್ಟಣದ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿ, ಸಂತಾಪ ಸೂಚಿಸುವ ಸಂದರ್ಭದಲ್ಲಿ ಭಾವುಕರಾದರು. ಎಸ್.ಎಂ. ಕೃಷ್ಣರವರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಹೋರಾಟ ನಡೆಸಿದವರು. ಇವತ್ತು ರಾಜ್ಯ ಬೆಳಯಲು ಅವರ ಕೊಡುಗೆ ಸಾಕಷ್ಟಿದೆ. ಮುಖ್ಯವಾಗಿ ಐಟಿ-ಬಿಟಿಗಳನ್ನು ತರುವ ಮೂಲಕ ಬೆಂಗಳೂರನ್ನು ಇವತ್ತಿನ ಸಿಲಿಕಾನ್ ಸಿಟಿ ಮಾಡಿದ್ದು ಅವರೇ ಎಂದು ಸ್ಮರಿಸಿದ ಆರ್.ಎಸ್. ಪಾಟೀಲರು, ಅವರ ಯೋಜನೆಗಳು ಇಂದಿಗೂ ಸ್ಮರಣೀಯ ಎಂದರು.

ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ನಾನು ಲೋಕಸಭಾ ಸದಸ್ಯನಾಗಿದ್ದೆ. ಆಗ, ಆಲಮಟ್ಟಿ ಡ್ಯಾಂ ನಿರ್ಮಿಸಲು ಹಿರಿಯ ನಾಯಕ ಮಲ್ಲಿಕಾರ್ಜುನ ನೇತೃತ್ವದಲ್ಲಿ ಸಚಿವ ಸಂಪುಟವನ್ನು ರಚನೆ ಮಾಡಿ ಮಹತ್ವದ ನಿರ್ಧಾರವನ್ನು ಕೈಗೊಂಡರು. ಹಿನ್ನೀರಿನಿಂದ ಮುಳಗಡೆಯಾಗಿದ್ದ ನಾಗರಿಕ ಸಮುದಾಯಕ್ಕೆ ಸೂಕ್ತ ಪರಿಹಾರವನ್ನು ಒದಗಿಸಿ ಪ್ರಾಮಾಣಿಕತೆಯನ್ನು ಮೆರೆದಿದ್ದ ಧೀಮಂತ ನಾಯಕ ಎಸ್.ಎಂ. ಕೃಷ್ಣ ಎಂದರು.

ಎಸ್.ಎಂ. ಕೃಷ್ಣ ನಮ್ಮ ನಿವಾಸಕ್ಕೆ ಗುಲಾಂ ನಬಿ ಅಜಾದ್‌ರನ್ನು ಕರೆ ತಂದಿದ್ದರು ಎಂದು ನೆನಪಿಸಿದ ಅವರು, ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ ಎಂದು ಸಂತಾಪ ಸೂಚಿಸಿದರು.

ರೈತರ ಹೆಸರಲ್ಲಿ ಸರ್ಕಾರಕ್ಕೂ ಕೋಟಿ ಕೋಟಿ ರೂ ವಂಚನೆ । ಗದುಗಿನಲ್ಲಿಯೇ ಇದ್ದಾರೆ ವಂಚಕ ಜಾಲದ ಕಿಂಗ್‌ಪಿನ್‌ಗಳು

# ಬೆಳೆವಿಮೆಯನ್ನೂ ಬಿಡದ ಧನ ಪಿಶಾಚಿಗಳು!

■ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಬದುಕು ಸದಾ ಕತ್ತಿಯ ಮೇಲಿನ ನಡಿಗೆಯಂತೆ. ಒಮ್ಮೆ ಚೆನ್ನಾಗಿ ಮಳೆ-ಬೆಳೆಯಾಗಿ ಉತ್ತಮ ಫಸಲು ಕೈಗೆ ದಕ್ಕಿದರೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗದೇ ಅಷ್ಟ ಅನುಭವಿಸಬೇಕಾಗುತ್ತದೆ. ಹವಾಮಾನ ವೈಪರಿತ್ಯದಿಂದ ಸದಾ ಆರ್ಥಿಕ ನಷ್ಟ ಅನುಭವಿಸುತ್ತಲೇ ಇರಬೇಕು. ಹೀಗೆ ಹವಾಮಾನ ವ್ಯತ್ಯಾಸದಿಂದ ರೈತರಿಗಾಗುವ ನಷ್ಟವನ್ನು ಹಗುರಗೊಳಿಸಿ ತುಸು ನೆಮ್ಮದಿ ನೀಡಿ ರೈತ ವಲಯಕ್ಕೆ ಆಸರೆಯಾಗಬೇಕೆಂಬ ಉದ್ದೇಶದಿಂದ ಸರ್ಕಾರ ಬೆಳೆ ವಿಮೆ ವ್ಯವಸ್ಥೆ ಜಾರಿಗೆ ತಂದಿದೆ. ಆದರೆ, ಸರ್ವಾಂತರ್ಯಾಮಿಯಾಗಿರುವ ಕುತಂತ್ರಿಗಳು, ಧನ ಪಿಶಾಚಿಗಳು ಇಡೀ ವ್ಯವಸ್ಥೆಯನ್ನು ಬುಡಮೇಲು ಮಾಡುವ ಷಡ್ಯಂತ್ರ ನಡೆಸಿದ್ದು, ಈ ವಂಚನೆಯ ಪ್ರಮುಖ ರೂವಾರಿಗಳು ಗದಗ ಜಿಲ್ಲೆಯಲ್ಲಿದ್ದಾರೆಂದು ಹೇಳಲಾಗುತ್ತಿದೆ.

ಕಳೆದ ಹಿಂಗಾರು ಹಂಗಾಮಿನಲ್ಲಿ ಹೆಸರು ಬೆಳೆಗೆ

> ಬೆಳೆವಿಮೆ ಹಣವನ್ನು ರೈತರೇ ಖುದ್ದಾಗಿ ಭರಣ ಮಾಡಬೇಕು. ಆದರೆ, ವಂಚಕರು ಶ್ರೀಮಂತ ರೈತರ ಉತಾರ ಮತ್ತು ಆಧಾರ್ ಕಾರ್ಡ್ ಪಡೆದು ಹಣವನ್ನು ತಾವೇ ಭರಿಸುತ್ತಾರೆ. ಇದಾದ ಮೇಲೆ ಬೆಳೆವಿಮೆ ಹಣ ರೈತನ ಖಾತೆಗೆ ಜಮಾ ಆದಾಗ, ಅದರಲ್ಲಿ ಶೇ.50ರಷ್ಟು ಹಣವನ್ನು ವಂಚಕರಿಗೆ ನೀಡಬೇಕಾಗಿದ್ದು, ಅದನ್ನು ಏಜೆಂಟರ ಮೂಲಕ ಮಾಡಿಸಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ.






ಬೆಳೆವಿಮೆ ಬರುವಂತೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಆ ಪ್ರಕಾರ ರೈತರ ಬೆಳೆವಿಮೆ ಹಣವನ್ನ ವಂಚಕರೇ ಭರಿಸಿ, ವಿಮೆ ಪರಿಹಾರ ಬಂದ ಹಣದಲ್ಲಿ '50-50' ಮಾತುಕತೆ ಮಾಡಿಕೊಂಡು ಬಡ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರತೊಡಗಿವೆ.

ಇಂತಹ ವಂಚಕರು ಪ್ರತಿ ಗ್ರಾಮದಲ್ಲಿಯೂ ನೀಚ ಮನಸ್ಥಿತಿಯ ಸ್ಥಳೀಯ ಶ್ರೀಮಂತರ ಮೂಲಕ ಈ ಮೋಸದ ಜಾಲ ಬೀಸಿ, ಕೋಟಿ ಕೋಟಿ ರೂಪಾಯಿಗಳನ್ನು ಕೊಳ್ಳೆ ಹೊಡೆದು, ಸರಕಾರವನ್ನೂ ವಂಚಿಸುತ್ತಿದ್ದಾರೆ. ಈ ವಂಚನೆಯಲ್ಲಿ ಕೆಲ ಗ್ರಾಮ ಸೇವಕರು, ಪಿಡಿಓಗಳು ಕೂಡ ಇರುವುದು ಕಂಡು ಬಂದಿದೆ. ಬೆಳೆವಿಮೆ ಮಾಡಿಸಿದ ಹೊಲದಲ್ಲಿ ಚೆನ್ನಾಗಿಯೇ ಬೆಳೆದಿದ್ದ ಬೆಳೆಯನ್ನು ರಾತ್ರೋರಾತ್ರಿ ಖಾಲಿ ಮಾಡಿಸಿ, ವೀಕ್ಷಣೆ ಮಾಡಲು ಬಂದ ತಂಡಗಳಿಗೂ ಟೋಪಿ ಹಾಕಿ ಕಳಿಸಲಾಗಿದೆ ಎಂಬ ಅಂಶ ಬಯಲಾಗಿದೆ. ಗದಗ ಜಿಲ್ಲೆಯ ಹಳ್ಳಿಯೊಂದರ ಶ್ರೀಮಂತ ರೈತನೇ ಇದರ ಕಿಂಗ್‌ಪಿನ್ ಎನ್ನಲಾಗಿದ್ದು, ಆತನ ಅಡಿಯಲ್ಲಿ ಹಲವರು ಏಜೆಂಟ್‌ಗಿರಿ ಮಾಡುತ್ತಿದ್ದಾರೆ. ಅಷ್ಟೇ ಅಲ್ಲ, ಕೆಲವು ಗ್ರಾಮ ಒನ್ ಕೇಂದ್ರಗಳು ಕೂಡ ಇವರ ಜೊತೆ ಶಾಮೀಲಾಗಿವೆ ಎನ್ನಲಾಗುತ್ತಿದೆ.

ತೆರೆಮರೆಯಲ್ಲಿಯೇ ಕುಳಿತು ಇಂತಹ ವಂಚನೆಯ ಆಟವಾಡಿ ರೈತರಿಗೆ ಹಾಗೂ ಸರ್ಕಾರಕ್ಕೆ ಲಕ್ಷಾಂತರ ರೂ ನಾಮ ಎಳೆಯುತ್ತಿರುವ ಈ ಕಿಂಗ್‌ಪಿನ್‌ಗಳು ಗದಗ ಜಿಲ್ಲೆಯಲ್ಲಿಯೇ ಇದ್ದು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ತಪ್ಪಿತಸ್ಥರನ್ನು ಪತ್ತೆ ಹಚ್ಚಿ, ನಿಜ ರೈತರಿಗೆ ಅನುಕೂಲ ಮಾಡಿಕೊಡತ್ತಾರಾ ಎಂಬುದನ್ನ ಕಾದು ನೋಡಬೇಕಿದೆ.

> ಗದಗ ನಗರ ಹಾಗೂ ಗದಗ ಗ್ರಾಮೀಣ ಪ್ರದೇಶದಲ್ಲಿ ಬೀಡುಬಿಟ್ಟಿರುವ ಇಬ್ಬರು ವ್ಯಕ್ತಿಗಳು ಸಾವಿರಾರು ಶ್ರೀಮಂತ ರೈತರ ಬೆಳೆವಿಮೆಯನ್ನು ತಾವೇ ತುಂಬಿ, ಕೋಟಿ ಕೋಟಿ ರೂ ಹಣ ಗಳಿಸಿ, ಸರಕಾರಕ್ಕೆ ಹಾಗೂ ರೈತರಿಗೆ ವಂಚನೆ ಮಾಡುತ್ತಿದ್ದಾರೆ. ಈ ಕುರಿತು ವಿಶೇಷ ವರದಿಗಳ ಸರಣಿಯನ್ನು ನಿಮ್ಮ 'ವಿಜಯಸಾಕ್ಷಿ' ನಿಮ್ಮೆದುರು ತೆರೆದಿಡಲಿದೆ.



ಡಿ.15ರಂದು ಸಿಎಂ ಸಿದ್ದರಾಮಯ್ಯ ಆಗಮನದ ಹಿನ್ನೆಲೆ । 50 ಸಾವಿರ ಜನ ಸೇರುವ ನಿರೀಕ್ಷೆ

# ಜಿಲ್ಲಾಧಿಕಾರಿಗಳಿಂದ ಸ್ಥಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ವಿಧಾನಸಭಾ ಮತಕ್ಷೇತ್ರದಲ್ಲಿ 200 ಕೋಟಿ ರೂಗಳ ವೆಚ್ಚದ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹಲವು ಮುಖಂಡರು, ಸಚಿವರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಾಲೂಕಾ ಕ್ರೀಡಾಂಗಣಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿದರು.

ಕಾರ್ಯಕ್ರಮಕ್ಕೆ 50 ಸಾವಿರ ಜನ ಸೇರುವ ನಿರೀಕ್ಷೆಯಿರುವ ಹಿನ್ನೆಲೆಯಲ್ಲಿ ಈಗಾಗಲೇ 30 ಸಾವಿರ ಆಸನ ಸಾಮರ್ಥ್ಯದ ಬೃಹತ್ ಪೆಂಡಾಲ್‌ನ್ನು ಹಾಕಲಾಗುತ್ತಿದೆ. ಮಹಿಳೆಯರಿಗೆ 12 ಮತ್ತು ಪುರುಷರಿಗೆ 18 ಊಟದ ಕೌಂಟರ್‌ಗಳನ್ನು ನಿರ್ಮಿಸಲು ಸೂಚಿಸಿದ ಜಿಲ್ಲಾಧಿಕಾರಿಗಳು, ಕಾರ್ಯಕ್ರಮಕ್ಕೆ ಆಗಮಿಸುವ ಜನರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಪಾರ ಪ್ರಮಾಣದಲ್ಲಿ ಜನ ಸೇರುವ ಕಾರಣ, ಸುಗಮ ಸಂಚಾರಕ್ಕೆ ತೊಂದರೆಯಾಗಬಾರದು ಎಂದು



ಜಿಲ್ಲಾಧಿಕಾರಿಗಳು ಹೇಳಿದಾಗ, ಪುರಸಭಾ ಸದಸ್ಯ ಸಂಗನಗೌಡ ಪಾಟೀಲ ಪ್ರತಿಕ್ರಿಯಿಸಿ, ನಾಲ್ಕು ಎಕರೆ ಜಮೀನು ಸೇರಿದಂತೆ ಎಂಆರ್‌ಬಿಸಿ ಆವರಣ, ವಿ.ಎಫ್. ಪಾಟೀಲ ಶಾಲಾ ಆವರಣ, ಎಂಆರ್‌ಬಿಸಿ ಕಾಲೋನಿಗಳಲ್ಲಿ ವಾಹನಗಳನ್ನು ನಿಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅನ್ಯ ಮಾರ್ಗಗಳಿಂದ ಬರುವ ವಾಹನಗಳಿಗೆ ಅದೇ ಮಾರ್ಗದಲ್ಲಿ ವಾಹನ ನಿಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ ಎಂದರು.

ಸರಕಾರದ ವಿವಿಧ ಯೋಜನೆಗಳನ್ನು ಪ್ರಚುರಪಡಿಸಲು 20 ಮಳಿಗೆಗಳನ್ನು ಹಾಕಬೇಕು. ಧ್ವನಿವರ್ಧದ ಮೂಲಕ ಜನರಿಗೆ ಯೋಜನೆಗಳ ಮಹತ್ವವನ್ನು ತಿಳಿಸಬೇಕು. ಅಲ್ಲದೆ ಎಲ್‌ಇಡಿ ಪರದೆ ಮೂಲಕವೂ ಯೋಜನೆಗಳ ಬಗ್ಗೆ ಮಾಹಿತಿ ನಿಡಬೇಕು ಎಂದರು. ತಹಸೀಲ್ದಾರ್ ನಾಗರಾಜ ಕೆ ಪ್ರತಿಕ್ರಿಯಿಸಿ, ಸಮಾವೇಶದಲ್ಲಿ ವೇದಿಕೆ ಹಿಂಬಾಗದ ಎಲ್‌ಇಡಿ ಪರದೆಯನ್ನು ಹೊರತುಪಡಿಸಿ ಇನ್ನೂ ನಾಲ್ಕು ಕಡೆಗಳಲ್ಲಿ ಎಲ್‌ಇಡಿ ಪರದೆಯನ್ನು ಹಾಕುವ ವ್ಯವಸ್ಥೆ ಮಾಡಲಾಗಿದೆ ಎಂದರು.

ಜಿ.ಪಂ ಸಿಇಒ ಭರತ್ ಎಸ್, ಡಿವಾಯ್‌ಎಸ್ಪಿ ಪ್ರಭುಗೌಡ, ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ, ಸಿಪಿಐ ಎಸ್.ಎಸ್. ಬೀಳಗಿ, ಪಿಎಸ್‌ಐ ಪ್ರಕಾಶ ಬಣಕಾರ, ಆಹಾರ ಸರಬರಾಜು ವಿಭಾಗದ ಸುವರ್ಣಾ ಜುಮ್ಮನಕಟ್ಟಿ, ವೀರಣ್ಣ ಶೆಟ್ಟರ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಅಪ್ಪು ಗಿರಡ್ಡಿ, ಸಂಗು ನವಲಗುಂದ, ಅಭಿಷೇಕ ನವಲಗುಂದ, ಮಲ್ಲಯ್ಯಜ್ಜ ಮಹಾಪುರುಷಮಠ, ಯಲ್ಲಪ್ಪ ಕಿರೇಸೂರ, ಮಲ್ಲು ರಾಯನಗೌಡ್ರ ಸೇರಿದಂತೆ ರೋಣ, ಗಜೇಂದ್ರಗಡ ತಹಸೀಲ್ದಾರ್ ಮತ್ತು ಪುರಸಭೆಯ ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

> ಕಾರ್ಯಕ್ರಮದ ಯಶಸ್ವಿಗೆ ಶ್ರಮಿಸುತ್ತಿರುವ ಪುರಸಭಾ ಸದಸ್ಯ ಸಂಗನಗೌಡ ಪಾಟೀಲ ಕ್ರೀಡಾಂಗಣ ಹಾಗೂ ಜನರು ಆಗಮಿಸುವ ಕುರಿತು ಜಿಲ್ಲಾಧಿಕಾರಿಗಳಿಗೆ ಸಮಗ್ರ ಮಾಹಿತಿಯನ್ನು ಒದಗಿಸಿದರು. ಅಲ್ಲದೆ, ಯುವ ಪಡೆಯನ್ನು ಕಟ್ಟಿಕೊಂಡು ಎಲ್ಲರ ಜೊತೆಗೆ ಬೆರೆತು ಕೆಲಸ ನಿರ್ವಹಿಸುತ್ತಿರುವ ದೃಶ್ಯ ಕ್ರೀಡಾಂಗಣದಲ್ಲಿ ಕಂಡು ಬಂದಿತು.

## ಅಮೂಲ್ಯವಾದ ವ್ಯಕ್ತಿಯನ್ನು ನಾವು ಕಳೆದುಕೊಂಡಿದ್ದೇವೆ: ಎಸ್ ಎಮ್ ಕೃಷ್ಣ ನಿಧನಕ್ಕೆ ಎಚ್.ಕೆ.ಪಾಟೀಲ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ

ವಯೋಸಹಜ ಕಾಯಿಲೆಯಿಂದ ಇಂದು ತಡರಾತ್ರಿ ನಿಧನರಾದ ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರ ನಿಧನಕ್ಕೆ ಕಾನೂನು ಸಚಿವ ಹೆಚ್.ಕೆ ಪಾಟೀಲ್ ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ಜನತೆಯ ಆರ್ಥಿಕ ಉತ್ಕರ್ಷಕ್ಕೆ ಕಾರಣವಾಗುವ ಕರ್ನಾಟಕದ ಅಭಿವೃದ್ಧಿಯ ಚಿಂತನೆ ಮತ್ತು ಅಭಿವೃದ್ಧಿ ಗತಿಯ ಚಲನ ಶೀಲತೆಯನ್ನು ಸವಾಲಾಗಿ ಸ್ವೀಕರಿಸಿ, ಪ್ರಾದೇಶಿಕ ಅಸಮತೋಲನವನ್ನು ಸಮತೋಲನಗೊಳಿಸುವ ನಿಟ್ಟಿನಲ್ಲಿ ಪ್ರಾದೇಶಿಕ ತಾರತಮ್ಯ ನಿವಾರಣೆಯ ಸದುದ್ದೇಶದಿಂದ ಶ್ರೀ ಡಿ.ಎಂ. ನಂಜುಂಡಪ್ಪ ಅವರ ನೇತೃತ್ವದಲ್ಲಿ ಉನ್ನತಾಧೀಕಾರ ಸಮಿತಿಯನ್ನು ನೇಮಿಸಿ ಉತ್ತರ ಕರ್ನಾಟಕದ ಅಭಿವೃದ್ಧಿಪರ ಚಿಂತನೆಯನ್ನು ಎತ್ತರಕ್ಕೆ ಕೊಂಡೊಯ್ದ ಕಾಲಘಟ್ಟದಲ್ಲಿ ಕರ್ನಾಟಕದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಸನ್ಮಾನ್ಯ ಶ್ರೀ ಎಸ್. ಎಂ. ಕೃಷ್ಣ ಅವರ ನಿಧನದಿಂದ ಕನ್ನಡ ನಾಡು ಬಡವಾಗಿದೆ.



ಶ್ರೀ ಡಿ.ಎಂ. ನಂಜುಂಡಪ್ಪ ಸಮಿತಿಯನ್ನು ನೇಮಕ ಮಾಡಬೇಕೆಂಬ ಸಲಹೆಯನ್ನು ಅತ್ಯಂತ ಗೌರವದಿಂದ ಸ್ವೀಕರಿಸಿ ಉತ್ತರ ಕರ್ನಾಟಕಕ್ಕೆ ನ್ಯಾಯ ಒದಗಿಸಿದ ಎಸ್.ಎಂ. ಕೃಷ್ಣ ಅವರನ್ನು ನಾನು ಅತ್ಯಂತ ಕೃತಾಂಜಲಿಯಿಂದ ನೆನೆಯುವೆ.

ನನ್ನ "ಚಲುವ ಕನ್ನಡ ನಾಡು ನನಸಾಗದ ಕನಸು" ಪುಸ್ತಕದ ಉಪಸಂಹಾರವನ್ನು 1999ರಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದ ಎಸ್.ಎಂ. ಕೃಷ್ಣ ಅವರು ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯ ಭಾಗವನ್ನಾಗಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿದರು. ಅಧಿಕಾರಕ್ಕೆ ಬಂದ ನಂತರ ನುಡಿದಂತೆ ನಡೆದ ಎಸ್.ಎಂ. ಕೃಷ್ಣ ನನ್ನೊಂದಿಗೆ ಸುದೀರ್ಘವಾಗಿ ಸಮಾಲೋಚಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಈ ಸಮಿತಿಯನ್ನು ನೇಮಿಸಿದ್ದು ಐತಿಹಾಸಿಕ ಘಟನೆ.

ಕೃಷ್ಣ-ಕಾವೇರಿ ಹೋರಾಟದ ಸಂದರ್ಭದಲ್ಲಿ ಕರ್ನಾಟಕದ ಪ್ರತಿಯೊಬ್ಬ ನಾಗರೀಕನ ಆಶೋತ್ತರಗಳನ್ನು ಎಲ್ಲ ವೇದಿಕೆಗಳಲ್ಲಿ ಪ್ರತಿಪಾದಿಸಿದ ಎಸ್.ಎಂ. ಕೃಷ್ಣ ಜಲವಿವಾದಗಳ ವಿಷಯಗಳಲ್ಲಿ ಕರ್ನಾಟಕಕ್ಕೆ ನ್ಯಾಯ ತಂದುಕೊಡುವಲ್ಲಿ ಅವಿರತವಾಗಿ ಶ್ರಮ ವಹಿಸಿದರು. ಕರ್ನಾಟಕ ಪ್ರತಿದಿನ 10000 ಕ್ಯೂಸೆಕ್ಸ್ ನೀರನ್ನು ತಮಿಳುನಾಡಿಗೆ ಬಿಡುಗಡೆ ಮಾಡಬೇಕೆಂದು ಆದೇಶ ಮಾಡಿದಾಗ ಆ ಆದೇಶವು ಪ್ರಧಾನಮಂತ್ರಿ ನೇತೃತ್ವದ ಕಾವೇರಿ ನದಿ ಪ್ರಾಧಿಕಾರ ಸಭೆ ಸೇರುವವರೆಗೂ ಮುಂದುವರೆಯುತ್ತದೆ ಎಂದು ಹೇಳಿ ಇಡೀ ಕರ್ನಾಟಕ ದಿಗ್ಭ್ರಮೆಗೊಂಡಾಗ ಅತ್ಯಂತ ಕಡಿಮೆ ಅವಧಿಯಲ್ಲಿ ಕಾವೇರಿ ನದಿ ಪ್ರಾಧಿಕಾರದ ಸಭೆ ನಡೆಸಿ ತಮಿಳುನಾಡಿಗೆ ನೀರು ಬಿಡುಗಡೆ ನಿಲ್ಲಿಸಿ ಕರ್ನಾಟಕಕ್ಕೆ ನ್ಯಾಯ ತಂದು-ಕೊಟ್ಟ ಕೀರ್ತಿಗೆ ಪಾತ್ರರಾದವರು.

▶▶3ನೇ ಪುಟಕ್ಕೆ

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ನಿಧನಕ್ಕೆ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಸಂತಾಪ

# ಸರ್ವತೋಮುಖ ಅಭಿವೃದ್ಧಿಯ ಹರಿಕಾರ ಎಸ್‌ಎಂಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕುಡಿಯುವ ನೀರಿಗಾಗಿ ಹಗಲೂ-ರಾತ್ರಿ ಪರಾಡುತ್ತಿದ್ದ ಲಕ್ಷ್ಮೇಶ್ವರ ತಾಲೂಕಿನ ಜನತೆಗೆ ತುಂಗಭದ್ರಾ ನದಿಯಿಂದ ಕುಡಿಯುವ ನೀರಿನ ಯೋಜನೆ ಸಾಕಾರಗೊಳಿಸಿದ ಭಗೀರಥ ಸಿಎಂ ಎಸ್.ಎಂ ಕೃಷ್ಣ ಅವರಾಗಿದ್ದು, ಅವರು ಈ ನೆಲದ ಸರ್ವತೋಮುಖ ಅಭಿವೃದ್ಧಿಗಾಗಿ ಮಾಡಿದ ಸೇವೆ ಸದಾ ಸ್ಮರಣೀಯ ಎಂದು ಲಕ್ಷ್ಮೇಶ್ವರದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಸ್ಮರಿಸಿದರು.

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ನಿಧನದ ಬಗ್ಗೆ ತೀವ್ರ ಸಂತಾಪ



ವ್ಯಕ್ತಪಡಿಸಿ, ಅವರ ವ್ಯಕ್ತಿತ್ವ ಮತ್ತು ತಮ್ಮೊಂದಿಗಿದ್ದ ಆತ್ಮೀಯತೆಯ ಬಗ್ಗೆ ಹೆಮ್ಮೆಯ ನುಡಿಗಳನ್ನಾಡಿದ ಜಿ.ಎಸ್. ಗಡ್ಡದೇವರಮಠ, ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅವರ ಸ್ವಕ್ಷೇತ್ರ ಮದ್ದೂರು ಮತ್ತು ಲಕ್ಷ್ಮೇಶ್ವರ ತಾಲೂಕಿನ ಕುಡಿಯುವ ನೀರಿನ ಯೋಜನೆ ಹಾಗೂ ಸವಣೂರ ಮೋತಿ ತಲಾಬ್ ಕೆರೆ ತುಂಬಿಸುವ ಯೋಜನೆ ಮಂಜೂರು ಮಾಡಲು ಸಂಪುಟ ಸಭೆ ಅನುಮೋದನೆ ನೀಡಿತ್ತು.

ಸಭೆಯ ಬಳಿಕ ಅವರನ್ನು ಕಂಡು ಲಕ್ಷ್ಮೇಶ್ವರಕ್ಕೆ ತುಂಗಭದ್ರ ಯೋಜನೆ ಮೊದಲು ಮಂಜೂರ ಮಾಡಲೇಬೇಕು ಎಂದು ಪಟ್ಟು ಹಿಡಿದ ವೇಳೆಯಲ್ಲಿ 'ಓಯ್ ಯಜ್ಞಾ ನನ್ನ ಮದ್ದೂರು ಕ್ಷೇತ್ರದ ಕುಡಿಯುವ ನೀರಿನ ಯೋಜನೆ ತಡವಾದರೂ ಚಿಂತೆ ಇಲ್ಲ ಮೊದಲು ನಿಮ್ಮ ಲಕ್ಷ್ಮೇಶ್ವರದ ತುಂಗಭದ್ರಾ ಯೋಜನೆ ಮಂಜೂರು ಮಾಡುತ್ತೇನೆ' ಎಂದು ಹೇಳಿ ಅದನ್ನು ಕಾರ್ಯಗತಗೊಳಿಸಿದ ಕೀರ್ತಿ ಎಸ್.ಎಂ. ಕೃಷ್ಣ ಅವರಿಗೆ ಸಲ್ಲುತ್ತದೆ. ಈ ವೇಳೆ ಎಸ್. ಎಂ. ಕೃಷ್ಣ ಅವರ ಪಕ್ಕದಲ್ಲಿದ್ದ ಅವರ ಧರ್ಮಪತ್ನಿ ಪ್ರೇಮಾ ಕೃಷ್ಣ ಅವರು ಸಹ ಲಕ್ಷ್ಮೇಶ್ವರದ ಯೋಜನೆ ಮಂಜೂರು ಮಾಡುವಂತೆ ಹೇಳಿದ್ದರು. ತಮ್ಮ ಸ್ವಕ್ಷೇತ್ರದ ಯೋಜನೆಯ ಮಂಜೂರಿಯನ್ನು ವಿಳಂಭ ಮಾಡಿ ನಮ್ಮ ಯೋಜನೆಗೆ ಮಂಜೂರಿ ಕೊಟ್ಟಿರುವದನ್ನು ಈ ಕ್ಷೇತ್ರದ ಜನತೆ ಎಂದಿಗೂ ಮರೆಯುವದಿಲ್ಲ ಎಂದು ಹೇಳಿದರು.

ಓರ್ವ ಮುತ್ಸದ್ದಿ, ರಾಜ್ಯದ ಬೆಳವಣಿಗೆಯಲ್ಲಿ ವಿಶೇಷ ಪಾತ್ರ ವಹಿಸಿದ್ದ ಅಜಾತಶತ್ರು ಎಸ್.ಎಂ. ಕೃಷ್ಣ ಅವರ ನಿಧನದಿಂದ ಓರ್ವ ಹಿತೈಷಿ ಮಾರ್ಗದರ್ಶಕರನ್ನು ಕಳೆದುಕೊಂಡಂತಾಗಿದೆ ಎಂದು ಭಾವುಕರಾಗಿ ಗಡ್ಡದೇವರಮಠ ಹೇಳಿದರು. ಈ ಆತ್ಮೀಯತೆಯಿಂದಲೇ ಮಂಗಳವಾರ ಬೆಂಗಳೂರಿನ ಸದಾಶಿವ ನಗರದಲ್ಲಿನ ಎಸ್‌ಎಂಕೆ ಅವರ ನಿವಾಸದಲ್ಲಿ ಪ್ರಾರ್ಥಿವ ಶರೀರಕ್ಕೆ ಹೂಮಾಲೆ ಅರ್ಪಿಸಿ ಅಂತಿಮ ದರ್ಶನ ಪಡೆದು ನಮನ ಸಲ್ಲಿಸಿದರು. ಅವರ ಪತ್ನಿ ಪ್ರೇಮಾ ಕೃಷ್ಣ ಅವರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಗಿರೀಶ ಕಲ್ಮಠ, ಸೋಮನಗೌಡ್ರ ಶಂಕರಗೌಡ್ರ ಇದ್ದರು.

> ವಿಶೇಷವಾಗಿ ನನ್ನೊಂದಿಗೆ ಆತ್ಮೀಯತೆಯಿಂದ ಮಾತನಾಡುತ್ತಿದ್ದ ಅವರು, ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಸಿಂಗಪೂರ ಪ್ರವಾಸದಿಂದ ಬರುವಾಗ ನನಗೆ ಕಫ್ಲಂಗಿ (ಶರ್ಟನ್ ತುಂಬು ತೋಳಿನ ಮುಂದೆ ಹಾಕಿಕೊಳ್ಳುವ ಸುಂದರವಾದ ಬಟನ್‌ಗಳು) ಗಳನ್ನು ತಂದುಕೊಟ್ಟ ವೇಳೆ ಗಡ್ಡದೇವರಮಠ ಅಜ್ಜಾರೆ... ವಿಧಾನಸಭೆಯಲ್ಲಿ ಕಫ್ಲಂಗಿ ಶರ್ಟ ಹಾಕಿಕೊಳ್ಳುವವರು ನೀವೊಬ್ಬರೇ ಎಂದು ಸಿಂಗಪೂರದಲ್ಲಿ ನೆನಪಿಸಿಕೊಂಡು ಇವುಗಳನ್ನು ತಂದಿದ್ದೇನೆ ಎಂದು ಹೇಳಿದ್ದನ್ನು ಗಡ್ಡದೇವರಮಠ ನೆನಪಿಸಿಕೊಂಡರು.



## ಲಾಠಿ ಚಾರ್ಜ್ ಖಂಡನೀಯ: ಸೋಮು ಚರೇದ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದ ಹಿನ್ನೆಲೆಯಲ್ಲಿ 2ಎ ಮೀಸಲಾತಿಗಾಗಿ ನಡೆದ ಹೋರಾಟಗಾರರ ಮೇಲೆ ರಾಜ್ಯ ಸರಕಾರ ಲಾಠಿ ಪ್ರಹಾರ ಮಾಡಿದ್ದನ್ನು ಬಿಜೆಪಿ ಯುವ ಮುಖಂಡ ಸೋಮು ಚರೇದ ಖಂಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪಂಚಮಸಾಲಿ ಸಮುದಾಯದವರು ತಮ್ಮ ಸಿಗಬೇಕಾದ 2ಎ ಮೀಸಲಾತಿಗಾಗಿ ಶಾಂತಿಯುತ ಹೋರಾಟ ಮಾಡುವಾಗ ಕಾಂಗ್ರೆಸ್ ಸರಕಾರ ಪೊಲೀಸರ ಮೂಲಕ ಗೂಂಡಾ ವರ್ತನೆ ತೋರಿಸಿದ್ದು ಖಂಡನೀಯ ಎಂದಿದ್ದಾರೆ. ಮಾನವ ಹಕ್ಕುಗಳ ದಿನಾಚರಣೆಯ ದಿನವೇ ರಕ್ತಪಾತ ಮಾಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಸರಕಾರವನ್ನು ಕೂಡಲೇ ರಾಜ್ಯಪಾಲರು ಪದಚ್ಯುತಿ ಗೊಳಿಸಬೇಕು ಎಂದು ಸೋಮು ಬ ಚರೇದ, ಸುಭಾಷ್ ಹೊಸಂಗಡಿ, ಶರಣು ಬರಶೆಟ್ಟಿ, ಸಂಗಪ್ಪ ಗುದ್ಲಿ ಸೇರಿದಂತೆ ಅನೇಕರು ಅಗ್ರಹಿಸಿದ್ದಾರೆ.

## ಮಹಾರಾಷ್ಟ್ರ: ಮುಂದಿನ ಚುನಾವಣೆಗಳಲ್ಲಿ ಬ್ಯಾಲೆಟ್ ಪೇಪರ್ ಬಳಸುವ ನಿರ್ಣಯ ಅಂಗೀಕರಿಸಿದ ಗ್ರಾಮಸಭೆ

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ

ಮಹಾರಾಷ್ಟ್ರದ ಸತಾರಾ ಜಿಲ್ಲೆಯ ಕೊಲೆವಾಡಿ ಗ್ರಾಮಸಭೆಯು, ಮುಂದಿನ ಚುನಾವಣೆಯನ್ನು ಬ್ಯಾಲೆಟ್ ಪೇಪರ್‌ನಲ್ಲಿ ನಡೆಸಲು ನಿರ್ಧರಿಸಿದೆ. ಇವಿಎಂಗಳ ವಿರುದ್ಧ ನಿರ್ಣಯವನ್ನು ಅಂಗೀಕರಿಸಿದ ರಾಜ್ಯದ ಎರಡನೇ ಗ್ರಾಮ ಇದಾಗಿದೆ.ಈ ಗ್ರಾಮವು ಕರಾಡ್ (ದಕ್ಷಿಣ) ವಿಧಾನಸಭಾ ಕ್ಷೇತ್ರದ ಅಡಿಯಲ್ಲಿ ಬರುತ್ತದೆ, ಈ ಹಿಂದೆ ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಪೃಥ್ವಿರಾಜ್ ಚವಾಣ್ ಅವರು ಈ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದರು. ನವೆಂಬರ್‌ನಲ್ಲಿ ನಡೆದ ಚುನಾವಣಾ ಸ್ಪರ್ಧೆಯಲ್ಲಿ ಅವರು ಬಿಜೆಪಿ ಅಭ್ಯರ್ಥಿ ಅತುಲ್ ಭೋಸ್ಲೆ ವಿರುದ್ಧ 39,355 ಮತಗಳಿಂದ ಸೋತಿದ್ದರು. ಇವಿಎಂ ಮೂಲಕ ಚಲಾವಣೆಯಾದ ಮತಗಳ ಬಗ್ಗೆ ಕೋಲೆವಾಡಿ ನಿವಾಸಿಗಳು ಅನುಮಾನ ವ್ಯಕ್ತಪಡಿಸಿದ ನಂತರ ನಿರ್ಣಯವನ್ನು ಅಂಗೀಕರಿಸಲಾಯಿತು.ಸೊಲ್ಲಾಪುರದ ಮಲ್ಶಿರಸ್ ಕ್ಷೇತ್ರದ ಮರ್ಕಡವಾಡಿಯ ಗ್ರಾಮಸ್ಥರ ಒಂದು ವಿಭಾಗವು ಇವಿಎಂಗಳ ವಿಶ್ವಾಸಾರ್ಹತೆಯ ಬಗ್ಗೆ ಅನುಮಾನ ವ್ಯಕ್ತಪಡಿಸುವ ಮತಪತ್ರಗಳನ್ನು ಬಳಸಿಕೊಂಡು ಅಣಕು "ಮರು ಮತದಾನ" ನಡೆಸಲು ಪ್ರಯತ್ನಿಸಿದ ಕೆಲವೇ ದಿನಗಳಲ್ಲಿ ಈ ನಿರ್ಣಯವನ್ನು ಅಂಗೀಕರಿಸಲಾಗಿದೆ.



ಲಕ್ಷ್ಮೇಶ್ವರದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಸಾಮೂಹಿಕವಾಗಿ ಪರೀಕ್ಷೆಗೆ ಪೂರಕವಾದ ಜೀವಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಸಮಾಜ ವಿಜ್ಞಾನ ವಿಷಯಗಳ ಮಾದರಿ ಚಿತ್ರಗಳನ್ನು ರಂಗೋಲಿಯಲ್ಲಿ ಬಿಡಿಸುವ ಮೂಲಕ ಗಮನ ಸೆಳೆದರು.

## ಕರ್ನಾಟಕದ ಮಾಜಿ ಮುಖ್ಯಮಂತ್ರಿ ಕೃಷ್ಣ ನಿಧನ! ಇಂದು ಅಂತ್ಯಕ್ರಿಯೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಮಾಜಿ ಮುಖ್ಯಮಂತ್ರಿ ಎಸ್ ಎಮ್ ಕೃಷ್ಣ ಅವರು ಮಂಗಳವಾರ ನಸುಕಿನಲ್ಲಿ ನಿಧನ ಹೊಂದಿದರು.

ಅನಾರೋಗ್ಯದಿಂದ ಬಳಲುತ್ತಿದ್ದ ಕೃಷ್ಣ ಅವರನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ.

ಎಸ್ ಎಂ ಕೃಷ್ಣ ಅವರು 1999 ರಿಂದ 2004ರವರೆಗೆ ಕರ್ನಾಟಕದ 16ನೇ ಮುಖ್ಯಮಂತ್ರಿಗಳಾಗಿದ್ದರು. ನಂತರ 2004 ರಿಂದ 2008ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿ, ಕೇಂದ್ರ ವಿದೇಶಾಂಗ ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದಾರೆ.

ಬಹುಕಾಲ ಕಾಂಗ್ರೆಸ್‌ನಲ್ಲಿಯೇ ಗುರುತಿಸಿಕೊಂಡಿದ್ದ ಎಸ್.ಎಂ.ಕೃಷ್ಣ ಅವರು ಬದಲಾದ ರಾಜಕೀಯ ಸನ್ನಿವೇಶಗಳಿಂದಾಗಿ ಮಾರ್ಚ್ 2017ರಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದರು.

ಬಿಜೆಪಿ ಸೇರ್ಪಡೆಯಾದ 2018ರ ವಿಧಾನಸಭಾ ಚುನಾವಣೆಯಲ್ಲಿ ಕೊನೆಯದಾಗಿ ಬಹಿರಂಗವಾಗಿ ಪ್ರಚಾರ ನಡೆಸಿದ್ದರು. ತದನಂತರ ಸಕ್ರಿಯ ರಾಜಕಾರಣದಿಂದ ಎಸ್.ಎಂ.ಕೃಷ್ಣ ಹಿಂದೆ ಸರಿದಿದ್ದರು.

ಇಂದು ಅಂತ್ಯಕ್ರಿಯೆ: ಮಾಜಿ ಸಿಎಂ ಎಸ್‌ಎಂ ಕೃಷ್ಣ ಅವರ ಅಂತ್ಯಕ್ರಿಯೆಯ ಇಂದು ಅವರ ಹುಟ್ಟೂರಾದ ಮಂಡ್ಯ ಜಿಲ್ಲೆ ಮದ್ದೂರಿನ ಸೋಮನಹಳ್ಳಿಯಲ್ಲಿ ನಡೆಯಲಿದೆ ಎಂದು ದೀರ್ಘಕಾಲದ ಒಡನಾಡಿಗಳು, ಸಂಬಂಧಿ ಆಗಿರುವ ಡಿಸಿಎಂ ಡಿಕೆ ಶಿವಕುಮಾರ್ ಮಾಧ್ಯಮ ಹೇಳಿಕೆಯ ಮೂಲಕ ತಿಳಿಸಿದ್ದಾರೆ.

**ಸಂತಾಪ:** ಮಾಜಿ ಸಿಎಂ ಎಸ್ ಎಂ ಕೃಷ್ಣ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಹಲವು ರಾಜಕೀಯ ಗಣ್ಯರಿಂದ ಸಂತಾಪ ಸೂಚಿಸಲಾಗಿದೆ.

ಈ ಸಂಬಂಧ ಫಿ ಮಾಡಿರುವ ಅಒ ಸಿದ್ದರಾಮಯ್ಯ, ಎಸ್.ಎಂ.ಕೃಷ್ಣ ಅವರ ಸಾವಿನಿಂದ ನಾನು ಆಘಾತಕ್ಕೀಡಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಸಲ್ಲಿಸಿರುವ ಸೇವೆ ಅನುಪಮವಾದುದು. ವಿಶೇಷವಾಗಿ ಮುಖ್ಯಮಂತ್ರಿಯಾಗಿ ಐಟಿ-ಬಿಟಿ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ ಕರ್ನಾಟಕ ಸದಾ ಋಣಿಯಾಗಿರುತ್ತದೆ. ಮುತ್ಸದ್ದಿ ರಾಜಕಾರಣಿಯಾಗಿದ್ದ ಕೃಷ್ಣ ಅವರು ಅಜಾತ ಶತ್ರುಗಳಾಗಿದ್ದರು. ನಾನು ಕಾಂಗ್ರೆಸ್ ಪಕ್ಷಕ್ಕೆ ಸೇರಿದ ಪ್ರಾರಂಭದ ದಿನಗಳಲ್ಲಿ ನನಗೆ ಮಾರ್ಗದರ್ಶಕರಾಗಿದ್ದ ಕೃಷ್ಣ ಅವರು ಸದಾ ನನ್ನ ಹಿತೈಷಿಗಳಾಗಿದ್ದರು ಎಂದು ಅವರು ಹೇಳಿಕೊಂಡಿದ್ದಾರೆ.

ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬ ವರ್ಗ ಮತ್ತು ಅಭಿಮಾನಿಗಳ ದು:ಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಭಗವಂತನಲ್ಲಿ ಕೋರುತ್ತೇನೆ ಎಂದು ಎಸ್ ಎಂ ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

### ಮಾಗಡಿ ಕೆರೆಯಲ್ಲಿಗ ವಿದೇಶಿ ವಲಸೆ ಪಕ್ಷಿಗಳ ಕಲರವ


# ವಿದೇಶಿ ಬಾನಾಡಿಗಳ ಸುಂದರ ತಾಣ


ಪಕ್ಷಿಗಳು ಭೂಮಿಯ ಮೇಲಿನ ಸೊಗಸಾದ, ಸ್ಫೂರ್ತಿದಾಯಕ ಜೀವಿಗಳಾಗಿವೆ. ಅವು ಸೌಂದರ್ಯ, ಸಂತೋಷ, ಧೈರ್ಯ, ಬುದ್ಧಿವಂತಿಕೆ, ಮತ್ತು ಹಾರುವ ತಮ್ಮ ಅದ್ಭುತ ಸಾಮರ್ಥ್ಯದೊಂದಿಗೆ ಸ್ವಾತಂತ್ರ್ಯದ ಸಂಕೇತಗಳೂ ಆಗಿವೆ. ಶಿರಹಟ್ಟಿಯ ಮಾಗಡಿ ಕೆರೆಗೆ ವಿದೇಶಿ ಬಾನಾಡಿಗಳು, ಪ್ರತಿ ವರ್ಷದಂತೆ ಈ ವರ್ಷವೂ ಸಹ ಆಗಮಿಸಿ ಪಕ್ಷಿ ಪ್ರಿಯರನ್ನು ಕೈಬೀಸಿ ಕರೆಯುತ್ತಿವೆ.

ಗದುಗಿನ ಮಾಗಡಿ ಕೆರೆ ಹಾಗೂ ಶೆಟ್ಟಿಕೆರೆ ನಯನ ಸುಂದರ ವಲಸೆ ಬಾನಾಡಿಗಳ ತಾಣವಾಗಿ ಏರ್ಪಟ್ಟಿವೆ. ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನಲ್ಲಿರುವ ಮಾಗಡಿ ಗ್ರಾಮದ ಈ ಕೆರೆಯ ಒಟ್ಟು ವಿಸ್ತೀರ್ಣ 134.15 ಎಕರೆಯಷ್ಟು. ಇದು ಚಿಕ್ಕದಾದ ನಯನ ಮನೋಹರ ಬಾನಾಡಿಗಳ ತಾಣವಾಗಿದೆ. ಚಳಿಗಾಲ ಆರಂಭವಾದರೆ ಸಾಕು, ಸಾವಿರಾರು ಕಿಲೋಮೀಟರ್ ದೂರದಿಂದ ಹಿಮಾಲಯ ಮತ್ತು ಸಾಗರ-ಸಮುದ್ರ ದಾಟಿ ಮಾಗಡಿ ಕೆರೆಗೆ ನವೆಂಬರ್ ತಿಂಗಳಾಂತ್ಯಕ್ಕೆ ಆಗಮಿಸುತ್ತವೆ ಮತ್ತು ಈಗಾಗಲೇ ಬಂದಿವೆ.

ಈಗ ವಿದೇಶಿ ಪಕ್ಷಿಗಳ ಆಗಮನದಿಂದ ಗದಗ ಜಿಲ್ಲೆ ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಇಲ್ಲಿ ದೇಶ-ವಿದೇಶಗಳಿಂದ ಬಾನಾಡಿಗಳು ಪ್ರತಿವರ್ಷ ಚಳಿಗಾಲದ ಸಮಯದಲ್ಲಿ ಬಂದು ಸಂತಾನೋತ್ಪತ್ತಿ ಮಾಡುವ ಸಲುವಾಗಿ ಲಗ್ಗೆ ಇಡುತ್ತವೆ. ನಮ್ಮದೇ ನಾಡಿನಲ್ಲಿರುವ ಮಾಗಡಿ ಕೆರೆಗೆ ಬಂದರೆ ವಿದೇಶಿ ಹಕ್ಕಿಗಳ ಸೌಂದರ್ಯವನ್ನು ಕಣ್ತುಂಬಿಕೊಳ್ಳಬಹುದು. ಮಾಗಡಿ ವಲಸೆ ಹಕ್ಕಿಗಳ ತಾಣವು ಗದಗದಿಂದ ಹಾವೇರಿಗೆ ತೆರಳುವ ಮಾರ್ಗದ ಎಡಭಾಗದಲ್ಲಿ 27 ಕೀ.ಮೀ ಹಾಗೂ ಲಕ್ಷ್ಮೇಶ್ವರದಿಂದ 14 ಕಿ.ಮೀ ದೂರದಲ್ಲಿದೆ.

ನವೆಂಬರ್ ತಿಂಗಳಾಂತ್ಯಕ್ಕೆ ಇಲ್ಲಿಗೆ 130ಕ್ಕೂ ಹೆಚ್ಚು ಜಾತಿಯ ಹಕ್ಕಿಗಳು ವಿವಿಧ ದೇಶಗಳಿಂದ ವಲಸೆ ಬರುವದಾಗಿ ಪಕ್ಷಿ ತಜ್ಞರು ಗುರುತಿಸಿದ್ದಾರೆ. ಪ್ರತಿವರ್ಷವೂ ಚಳಿಗಾಲದ ವೇಳೆ ಕಳೆದ 9-10 ವರ್ಷಗಳಿಂದ ಮಂಗೋಲಿಯ, ಪಾಕಿಸ್ತಾನ, ಬಾಂಗ್ಲಾದೇಶ, ನೇಪಾಳ, ಸೈಬೇರಿಯಾ, ಮಲೇಷಿಯಾ, ಆಸ್ಟ್ರೇಲಿಯಾ, ನ್ಯೂಜಿಲ್ಯಾಂಡ್, ಲಡಾಖ್, ಟಿಬೆಟ್, ಸೈಬಿರಿಯ





ಸಹಿತ ಹತ್ತಾರು ದೇಶಗಳಿಂದ ಸಹಸ್ರಾರು ಪಕ್ಷಿಗಳು ಬರುತ್ತಿವೆ ಎಂದು ಹೇಳಲಾಗುತ್ತಿದೆ. ಇವುಗಳ ಕಲರವ ಪ್ರತಿವರ್ಷ ಕೆರೆಗೆ ರಂಗು ತರುತ್ತಿದೆ.

ಅವುಗಳಲ್ಲಿ ಗೀರು ತಲೆಯ ಬಾತುಕೋಳಿ (ಬಾರ್ ಹೆಡೆಡ್ ಗೂಸ್), ಹಂಸಗಳ ಜಾತಿಗೆ ಸೇರಿದ ಪೇಂಟೆಡ್ ಸ್ಟಾರ್ಕ್, ಪಟ್ಟೆ ತಲೆ ಹೆಬ್ಬಾತು ಪಕ್ಷಿಗಳು, ಬ್ರಾಹ್ಮಿಣಿ ಡಕ್, ವೈಟ್ ಬಿಸ್, ಬ್ಲಾಕ್ ಬಿಸ್, ಲಿಟಲ್ ಕಾರ್ಮೊರಂಟ್, ಬ್ಲಾಕ್ ಐಬಿಸ್, ಪೈಂಟೆಡ್ ಸ್ಟಾರ್ಕ್, ಸ್ಪೂನ್ ಬಿಲ್, ಲಿಟ್ಲ್ ಕಾರ್ಪೋರಲ್ಸ್, ಅಟಲ್ರಿಂಗ್ ಪ್ಲೋವರ್ ಹೀಗೆ ಸುಮಾರು 26ಕ್ಕೂ ಹೆಚ್ಚು ಜಾತಿಯ ಪಕ್ಷಿಗಳು ಈ ಕೆರೆಗೆ ಆಗಮಿಸುತ್ತವೆ.

ಈ ಕೆರೆಯು ಎರೆ ಅಥವಾ ಕಪ್ಪು ಮಣ್ಣಿನಿಂದ ಕೂಡಿದ್ದು, ಇಲ್ಲಿ ಮೀನು, ಉಭಯಚರ, ಮೃದ್ವಂಗಿಗಳು ಹಾಗೂ ಹಾವುಗಳು ವಿಫುಲವಾಗಿರುವುದರಿಂದ ತಿನ್ನಲು ಅನುಕೂಲಕರವಾದ ಸ್ಥಳವಾಗಿದೆ. ಸುತ್ತಲಿನ ಪ್ರದೇಶದಲ್ಲಿ 20-25ಮೈಲಿ ದೂರದವರೆಗೆ ವಲಸೆ ಹಕ್ಕಿಗಳು ಚಲಿಸುತ್ತಾ, ಅವು ಆಹಾರ ಅರಸಿ, ನಿತ್ಯ ರಾಮಗೇರಿ, ಪಶುಪತಿಹಾಳ, ಸಂಶಿ, ಹಿರೆಗುಂಜಳ, ಯಳವತ್ತಿ, ಯತ್ನಳ್ಳಿ, ಗೊಜನೂರ, ಬಸಾಪುರ ಮತ್ತಿತರ ಗ್ರಾಮಗಳ ವ್ಯಾಪ್ತಿಯಲ್ಲಿ ಸಂಚರಿಸಿ ಇಲ್ಲಿನ ಕೃಷಿ ಉತ್ಪನ್ನಗಳಾದ ಶೇಂಗಾ, ಹಸಿ ಕಡಲೆ ಗಿಡಗಳಲ್ಲಿರುವ ಕೀಟಗಳನ್ನು ಭಕ್ಷಿಸುತ್ತವೆ. ಹಸಿವು ನೀಗಿಸಿಕೊಂಡು ಮತ್ತೆ ಮಾಗಡಿ ಕೆರೆಗೆ ಬಂದು ವಾಸ್ತವ್ಯ ಹೂಡುತ್ತವೆ.

ಪ್ರತಿ ವರ್ಷದ ಚಳಿಗಾಲ (ನವೆಂಬರ್ ತಿಂಗಳಾಂತ್ಯಕ್ಕೆ) ಪ್ರಾರಂಭವಾಗುತ್ತಿದ್ದಂತೆಯೇ ಮಾಗಡಿ ಕೆರೆಯಲ್ಲಿ ವಿದೇಶಿ ಪಕ್ಷಿಗಳ ವಲಸೆ ಬರಲು ಪ್ರಾರಂಭವಾಗುತ್ತದೆ. ಪಕ್ಷಿಗಳು ಹೆಚ್ಚಾಗಿರುವ ಸ್ಥಳದಲ್ಲಿ ವೀಕ್ಷಣಾ ಗೋಪುರ (ಕೆರೆಯ ಪಶ್ಚಿಮ ದಿಕ್ಕಿನಲ್ಲಿ) ನಿರ್ಮಿಸಲಾಗಿದ್ದು, ಪಕ್ಷಿಗಳ ಮಾಹಿತಿ ಫಲಕಗಳಿಂದ ಮಾಹಿತಿ ಪಡೆಯಬಹುದು.

2024ರ ಯುನೆಸ್ಕೋ 'ರಾಮ್ಸಾರ್ ವೆಟ್ಲ್ಯಾಂಡ್' ಪಟ್ಟಿಗೆ ರಾಜ್ಯದ ಮಾಗಡಿ ಕೆರೆ ಸ್ಥಾನ ಪಡೆದುಕೊಂಡಿದೆ. ಹಾಗಾಗಿ ಈ ಕೆರೆಗೆ ಮತ್ತು ಗದಗ ಜಿಲ್ಲೆಗೆ ಮತ್ತೊಂದು ಹಿರಿಮೆ ಎಂದು ಹೇಳಿದರೆ ತಪ್ಪಾಗಲಾರದು. ವಿದೇಶಿ ಪಕ್ಷಿಗಳ ಆಶ್ರಯ ತಾಣವಾದ ಮಾಗಡಿ ಕೆರೆಯು 'ರಾಮ್ಸಾರ್ ವೆಟ್ಲ್ಯಾಂಡ್ ಸೈಟ್' ಪಟ್ಟಿಗೆ ಸೇರ್ಪಡೆಯಾಗುವ ಮೂಲಕ ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾನ್ಯತೆ ಪಡೆದು ಮಾಗಡಿ ಕೆರೆ ಬಾನಾಡಿಗಳ ಸಂತಾನ ಅಭಿವೃದ್ಧಿಗೆ ಪೂರಕವಾದ ವಾತಾವರಣವನ್ನು ಹೊಂದಿದೆ.

ಮಾಗಡಿ ಕೆರೆಯು ಕಪ್ಪತಗುಡ್ಡ ವನ್ಯಜೀವಿ ಧಾಮ ವ್ಯಾಪ್ತಿಯಲ್ಲಿ ಒಂದು ಪಕ್ಷಿ ವಿಹಾರದ ತಾಣವಾಗಿ ಪ್ರಸಿದ್ಧಿ ಪಡೆಯುತ್ತಿದೆ. ವಿಶೇಷವೆಂದರೆ, ಈಗ ಮಾಗಡಿ ಕೆರೆ ವಿದೇಶಿ ಹಕ್ಕಿಗಳ ಬೀಡಾಗಿರುವುದು ಕಪ್ಪತಗುಡ್ಡ ಸೌಂದರ್ಯಕ್ಕೆ ಮತ್ತಷ್ಟು ಬಲ ಬಂದಿದೆ. ಆದರೆ ಕೆರೆಯಲ್ಲಿ ಸ್ವಚ್ಛಂದವಾಗಿ ವಿಹರಿಸುವ ವಿದೇಶಿ ಪಕ್ಷಿಗಳನ್ನು ಬೇಟೆಯಾಡಲು ಕೆಲವರು ಹೊಂಚು ಹಾಕುತ್ತಿರುವುದು ವಿಷಾದನೀಯ ಹಾಗೂ ಸರ್ಕಾರ ಇವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಪಕ್ಷಿ ಪ್ರಿಯರ ಅಳಲು ಮತ್ತು ಕಳಕಳಿಯಾಗಿದೆ.

ಒಟ್ಟಾರೆಯಾಗಿ ಹೇಳುವುದಾದರೆ ಇಲ್ಲಿಗೆ ಬಂದು ಹೋಗುವ ಅನೇಕ ಪಕ್ಷಿಗಳು ಮುಂದಿನ ದಿನಗಳಲ್ಲಿ ಅಳಿವಿನಂಚಿನಲ್ಲಿರುವುದನ್ನು ತಪ್ಪಿಸಲು ಪಕ್ಷಿ ಪ್ರಿಯರ ಅವಿರತ ಪ್ರಯತ್ನ ಮಾತ್ರ ಸಾಲದು, ಜನ ಸಾಮಾನ್ಯರ ಪ್ರೀತಿ, ದಯೆ,



ಕರುಣೆ ಪಕ್ಷಿಗಳ ಮೇಲೆ ಇದ್ದಾಗ ಪಕ್ಷಿ ಪ್ರಭೇದಗಳು ಉಳಿಯುತ್ತವೆ.

ತಲುಪುವ ದಾರಿ: ಗದಗ ಜಿಲ್ಲಾ ಕೇಂದ್ರದಿಂದ 27 ಕಿ.ಮೀ, ಶಿರಹಟ್ಟಿಯಿಂದ 8 ಕಿ.ಮೀ, ಲಕ್ಷ್ಮೇಶ್ವರದಿಂದ 14 ಕಿ.ಮೀ, ಹುಬ್ಬಳ್ಳಿಯಿಂದ 55 ಕಿ.ಮೀ ದೂರವಿದ್ದು, ಗದಗ-ಹಾವೇರಿಯಿಂದ ಸಾಕಷ್ಟು ಸಾರ್ವಜನಿಕ ಸಾರಿಗೆ ವ್ಯವಸ್ಥೆ ಇದೆ.



**– ಬಸವರಾಜ ಎಮ್.ಯರಗುಪ್ಪಿ.**
**ಬಿಆರ್‌ಪಿ, ಶಿರಹಟ್ಟಿ- ಲಕ್ಷ್ಮೇಶ್ವರ.**

### ರಾಜ್ಯಮಟ್ಟದ ಹೊನಲು ಬೆಳಕಿನ ಅಟ್ಯಾಪಟ್ಯಾ ಚಾಂಪಿಯನ್‌ಶಿಪ್ ಉದ್ಘಾಟಿಸಿದ ಅಕ್ಷಯ ಐ.ಪಾಟೀಲ

# ಕ್ರೀಡೆಯಲ್ಲಿ ಏಕಾಗ್ರತೆ, ಸಮನ್ವಯತೆ ಇರಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಟ್ಯಾ ಪಟ್ಯಾ ಎನ್ನುವುದು ದೇಸೀ ಕ್ರೀಡೆಯಾಗಿದೆ. ಶತಮಾನಗಳಿಂದಲೂ ವಿವಿಧ ಹೆಸರುಗಳಿಂದ ಕರೆಯಲ್ಪಡುತ್ತಿರುವ ಈ ಕ್ರೀಡೆ, ಬೆಳವಣಿಗೆ ಹೊಂದುತ್ತಾ ಬಂದಿದೆ. ಸದ್ಯ ನರೇಗಲ್ಲ ಭಾಗದಲ್ಲಿ ಈ ಕ್ರೀಡೆ ಸದ್ದು ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದು ಕಾಂಗ್ರೆಸ್ ಯುವ ಮುಖಂಡ ಅಕ್ಷಯ ಐ.ಪಾಟೀಲ ಹೇಳಿದರು.

ಗದಗ ಜಿಲ್ಲಾ ಆಟ್ಯಾ ಪಟ್ಯಾ ಸಂಸ್ಥೆ, ನರೇಗಲ್ಲ ಪಟ್ಟಣದ ಚೈತನ್ಯ ಸ್ಪೋರ್ಟ್ಸ್ ಕ್ಲಬ್ ಸಹಯೋಗದಲ್ಲಿ ಸ್ಥಳೀಯ ಹೊಸ ಬಸ್ ನಿಲ್ದಾಣದ ಎದುರಿಗಿನ ಸರ್ಕಾರಿ ಶಾಲೆಯ ಆವರಣದಲ್ಲಿ 32ನೇ ರಾಜ್ಯಮಟ್ಟದ ಹೊನಲು ಬೆಳಕಿನ ಅಟ್ಯಾಪಟ್ಯಾ ಚಾಂಪಿಯನ್‌ಶಿಪ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಮರ್ಥ್ಯ ಮತ್ತು ಯುಕ್ತಿ ಬಳಸಿ ಆಡುವ ಆಟ ಆಟ್ಯಾಪಟ್ಯಾ. ಈ ಕ್ರೀಡಾಕೂಟದಲ್ಲಿ ರಾಜ್ಯ ಹಾಗೂ ದೇಶವನ್ನು ಪ್ರತಿನಿಧಿಸಿದ ಅನೇಕ ಕ್ರೀಡಾಪಟುಗಳು ನರೇಗಲ್ಲ ಭಾಗದಲ್ಲಿರುವುದು ಕಂಡು ಸಂತೋಷವಾಯಿತು. ಕ್ರೀಡೆಯಲ್ಲಿ



ಏಕಾಗ್ರತೆ, ಸಮನ್ವಯತೆ ಇದ್ದಾಗ ಮಾತ್ರ ಜಯ ನಮ್ಮದಾಗಲು ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿ ತಂಡದ ಕ್ರೀಡಾಪಟುಗಳು ಸಂಘಟನಾತ್ಮಕವಾಗಿ ಆಟವಾಡಬೇಕು, ಕ್ರೀಡಾಕೂಟ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ವೇದಿಕೆಯ ಮೇಲೆ ಡಾ. ಎ.ಡಿ. ಸಾಮುದ್ರಿ, ನರೇಗಲ್ಲ ಶಹರ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಗದಗ ಜಿಲ್ಲಾ ಅಟ್ಯಾ-ಪಟ್ಯಾ ಸಂಸ್ಥೆಯ ಕಾರ್ಯದರ್ಶಿ ದಡೇಸೂರಮಠ, ಮೈಲಾರಪ್ಪ ವೀ.ಚಳ್ಳಮರದ, ಅಲ್ಲಾಭಕ್ಷಿ ನದಾಫ್, ಸಂತೋಷ ಹನಮಸಾಗರ, ಸಂಜೀವ ರಡ್ಡೇರ, ಉಮೇಶ ಸಂಗನಾಳಮಠ, ಕಲ್ಮೇಶ ತೊಂಡಿಹಾಳ, ಬಸವರಾಜ ವಂಕಲಕುಂಟಿ, ಬಸವರಾಜ ಕುರಿ, ತಿಮ್ಮರೆಡ್ಡಿ ಬಂಡಿವಡ್ಡರ, ಆರ್.ಎಸ್. ನರೇಗಲ್ಲ, ಭೀಮಪ್ಪ ಪೂಜಾರ, ನಿಂಗರಾಜ ಬೇವಿನಕಟ್ಟಿ, ವಿ.ಎ. ಕುಂಬಾರ, ರಫೀಕ ರೇವಡಿಗಾರ, ಮಹಾದೇವ ಬೇವಿನಕಟ್ಟಿ ಇದ್ದರು. ಕ್ರೀಡಾಕೂಟದಲ್ಲಿ ವಿವಿಧ ಜಿಲ್ಲೆಗಳ 500ಕ್ಕೂ ಹೆಚ್ಚಿನ ಸ್ಪರ್ಧಾಳುಗಳು ಪಾಲ್ಗೊಂಡಿದ್ದರು.

ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ಮುಖಂಡರಾದ ಮಿಥುನ ಪಾಟೀಲ, ರವೀಂದ್ರನಾಥ ದಂಡಿನ, ಶೇಕಪ್ಪ ಕೆಂಗಾರ, ಶೇಕಪ್ಪ ಜುಟ್ಲ, ಅಲ್ಲಾಭಕ್ಷಿ ನದಾಫ್, ಎನ್.ಕೆ. ಬೇವಿನಕಟ್ಟಿ ಮುಂತಾದವರಿದ್ದರು.

ಅಟ್ಯಾಪಟ್ಯಾ ಸಂಸ್ಥೆಯ ರಾಜ್ಯ ಪ್ರಭಾರಿ ಕಾರ್ಯದರ್ಶಿ ಎಲ್.ಸಿ. ಲಮಾಣಿ ಮಾತನಾಡಿ, ಈ ಆಟ ಖೋಖೋ ಆಟವನ್ನೇ ಹೋಲುತ್ತದೆ. ಅದೇ ಅಂಕಣ ಬಳಸಿಕೊಂಡು ಆಡಬಹುದು. ಇದಕ್ಕೆ ಯಾವುದೇ ಸಲಕರಣೆಗಳ ಅಗತ್ಯವಿಲ್ಲ. ಒಂದು ಸಮತಟ್ಟಾದ ಮೈದಾನ ಇದ್ದರೆ ಸಾಕು ಎಂದರು.

### ಪರಿಶಿಷ್ಟ ಜಾತಿ, ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷೆ ಪಲ್ಲವಿ ಜೆ. ಭೇಟಿ ಪರಿಶೀಲನೆ


# ಮೂಲಭೂತ ಸೌಲಭ್ಯ ಕಲ್ಪಿಸಲು ಅಧಿಕಾರಿಗಳಿಗೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ನರಗುಂದ

ಪಟ್ಟಣದ ಹರಣಶಿಕಾರಿ, ಘಂಟಿಚೋರ ಜನಾಂಗದ ಹಲವು ಕುಟುಂಬಸ್ಥರು ಸ್ವಂತ ಸೂರು, ನಿವೇಶನ, ಉದ್ಯೋಗ, ಉನ್ನತ ಶಿಕ್ಷಣ, ಶುಚಿತ್ವ, ಕುಡಿಯಲು ಶುದ್ಧ ನೀರಿನ ಸೌಲಭ್ಯವನ್ನು ಸಂಬಂಧಿಸಿದ ಅಧಿಕಾರಿಗಳು ಕಲ್ಪಿಸುವಂತೆ ಪರಿಶಿಷ್ಟ ಜಾತಿ, ಪ.ಪಂಗಡ, ಅಲೆಮಾರಿ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷೆ ಪಲ್ಲವಿ ಜೆ. ಅಧಿಕಾರಿಗಳಿಗೆ ಸೂಚಿಸಿದರು.

ನರಗುಂದ ಪಟ್ಟಣದ ಎನ್‌ಎಚ್‌ಟಿ ಮಿಲ್ ಹರಣಶಿಕಾರಿ, ಘಂಟಿಚೋರ, ಮೇದಾರ, ಅಂಬಿಗೇರ ಮುಂತಾದ ಅಲೆಮಾರಿ ಜನಾಂಗದವರ ಕಾಲೋನಿಗೆ ಭೇಟಿ ನೀಡಿ ಕುಂದುಕೊರತೆಗಳ ಸಭೆಯಲ್ಲಿ ಅವರು ಮಾತನಾಡಿದರು.

ಶೌಚಾಲಯಗಳಿಲ್ಲದೆ ಮಹಿಳೆಯರು ಬಹಿರ್ದೆಸೆಗೆ ತೆರಳುತ್ತಾರೆ. ಈ ಬಗ್ಗೆ ಇಲಾಖೆ ಅಧಿಕಾರಿಗಳು ಗಮನಹರಿಸದಿದ್ದರೆ ಶಿಸ್ತು ಕ್ರಮಕ್ಕಾಗಿ ಸರ್ಕಾರಕ್ಕೆ ಒತ್ತಾಯಿಸಬೇಕಾಗುತ್ತದೆ. ಮನುಷ್ಯರೇ ಅಲ್ಲ ಎಂಬಂತೆ ಪ್ರತಿಕ್ಷಣವೂ ಆತಂಕ, ಅಭದ್ರತೆ, ಶಿಕ್ಷಣ, ಉದ್ಯೋಗ, ವಿವಿಧ ಮೂಲಭೂತ ಸೌಕರ್ಯಗಳಿಂದ



ವಂಚಿತರಾಗಿರುವ ರಾಜ್ಯದ ಅಲೆಮಾರಿ ಜನಾಂಗದವರನ್ನು ಮುಖ್ಯ ವಾಹಿನಿಗೆ ತರಬೇಕೆಂಬ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಲೆಮಾರಿ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಿದೆ. ಇದು ಅರ್ಹರಿಗೆ ಸರಿಯಾಗಿ ತಲುಪಲಿ ಎಂದರು.

ಬೋರವೆಲ್ ನೀರು ಸೇವಿಸಿ ಅಸಾಂಕ್ರಾಮಿಕ ರೋಗಕ್ಕೆ ತುತ್ತಾಗುತ್ತಿರುವ ಶಾಲಾ ಮಕ್ಕಳಿಗೆ ಒಂದು ತಿಂಗಳೊಳಗೆ ಸ್ಥಳೀಯ ಪುರಸಭೆ, ಶಿಕ್ಷಣ ಇಲಾಖೆಯಿಂದ ಶುದ್ಧ ಕುಡಿಯುವ ನೀರು, ಸೋರುತ್ತಿರುವ ಮೇಲ್ಛಾವಣೆ ದುರಸ್ತಿಪಡಿಸಿರುವ ಬಗ್ಗೆ ಭಾವಚಿತ್ರ ಸಮೇತ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ವರದಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ, ತಾಲೂಕಾ ಅಧಿಕಾರಿ ಬಿ.ಎಂ. ಬಡಿಗೇರ, ಆನಂದ, ಬಸವರಾಜ ಭೀಮಣ್ಣವರ, ಸಿಪಿಐ ಮಂಜುನಾಥ ನಡುವಿನಮನಿ, ದುರ್ಗೇಶ ವಿಭೂತಿ, ಅನೀಲ ಭೋವಿ, ಎಸ್.ಆರ್. ರಾಯನಗೌಡ್ರ, ಎಚ್.ಎಂ. ಖುದಾವಂದ, ಎಸ್.ಎನ್. ಹರನಟ್ಟಿ, ಅರಣ್ಯ ಇಲಾಖೆ ಅಧಿಕಾರಿ ಡಿ.ಬಿ. ಪಠಾಣ, ಕೆ.ಎಸ್. ಹಾದಿಮನಿ, ಎಸ್.ಎಲ್. ಪಾಟೀಲ, ಚಂದ್ರು ಮಾದರ, ಮಲ್ಲಪ್ಪ ಅಬ್ಬಿಗೇರಿ, ದೇವಪ್ಪ ಕಟ್ಟಿಮನಿ ಇದ್ದರು.

ಶಿಕ್ಷಣ ಇಲಾಖೆಯಿಂದ ಅಲೆಮಾರಿ ಜನಾಂಗದ ಮಕ್ಕಳು ಮತ್ತು ಅವರ ಪೋಷಕರಿಗೆ ರಾತ್ರಿ ಶಾಲೆ ಪ್ರಾರಂಭಿಸಿ ಶಿಕ್ಷಣದ ಮಹತ್ವ ತಿಳಿಸಿಕೊಡುವುದರ ಜತೆಗೆ ಎಲ್ಲ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಟ್ಟು ರಾಜ್ಯದ ಎಲ್ಲ ಜಿಲ್ಲೆಗಳಿಗೆ ನರಗುಂದ ಮಾದರಿಯಾಗುವಂತೆ ಕಾರ್ಯ ನಿರ್ವಹಿಸಬೇಕೆಂದು ತಹಸೀಲ್ದಾರ ಶ್ರೀಶೈಲ ತಳವಾರ, ಪುರಸಭೆ ಮುಖ್ಯಾಧಿಕಾರಿ ಪಿ.ಕೆ. ಗುಡದಾರಿ, ಸಿಡಿಪಿಒ ಕಮಲಾ ಹುಲಕೋಟಿ, ಬಿಇಒ ಡಾ.ಗುರುನಾಥ ಹೂಗಾರ ಅವರಿಗೆ ಸೂಚಿಸಿದರು.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್11 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 22 – ಗಂಗಿಮಡಿ, ಅಪಾರ್ಟ್ಮೆಂಟ್, ಲೀಡ್ಕರ್ ಬಡಾವಣೆ, ಯಲ್ಲಮ್ಮನ ಗುಡಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಸಾಯಿನಗರ, ದೇವರಾಜ್ ಹಾಸ್ಟೆಲ್, ಕಲಾಮಂದಿರ ರಸ್ತೆ, ಸಾಯಿನಾಥ ಗುಡಿಯ ಹಿಂದಿನ ಭಾಗಗಳು, ಸಾಯಿನಾಥ ರಸ್ತೆ, ರಿಂಗ ರೋಡ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ತಿಳಿಸಲಾಗಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ನಗರಸಭೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಇಂಡಿಯಾ ಮೈತ್ರಿಕೂಟವನ್ನು ಮಮತಾ ಬ್ಯಾನರ್ಜಿ ಮುನ್ನಡೆಸಲಿ : ಲಾಲು ಪ್ರಸಾದ್ ಯಾದವ್

**■ವಿಜಯಸಾಕ್ಷಿ ಸುದ್ದಿ, ಪಾಟ್ನಾ**

ಕಾಂಗ್ರೆಸ್ ನೇತೃತ್ವದ 'ಇಂಡಿಯಾ' ಮೈತ್ರಿಕೂಟ ಮುನ್ನಡೆಸಲು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಹಾಗೂ ತೃಣಮೂಲ ಕಾಂಗ್ರೆಸ್ ವರಿಷ್ಠೆ ಮಮತಾ ಬ್ಯಾನರ್ಜಿ ಅವರಿಗೆ ಅವಕಾಶ ನೀಡಬೇಕು ಎಂದು ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಮಂಗಳವಾರ (ಡಿ.10) ಹೇಳಿದ್ದಾರೆ.ಬಿಜೆಪಿ-ವಿರೋಧಿ ಒಕ್ಕೂಟದ ಜವಾಬ್ದಾರಿಯನ್ನು ವಹಿಸಿಕೊಳ್ಳುವ ಇಂಗಿತವನ್ನು ಮಮತಾ ಬ್ಯಾನರ್ಜಿ ವ್ಯಕ್ತಪಡಿಸಿದ ಬೆನ್ನಲ್ಲೇ ಲಾಲು ಪ್ರಸಾದ್ ಯಾದವ್ ಅವರ ಪರ ಬ್ಯಾಟ್ ಬೀಸಿದ್ದಾರೆ.

ಇಂಡಿಯಾ ಒಕ್ಕೂಟದ ಪ್ರಮುಖ ಪಕ್ಷವಾಗಿರುವ ಕಾಂಗ್ರೆಸ್ ಮಮತಾ ಬ್ಯಾರ್ಜಿಯವರನ್ನು ಒಕ್ಕೂಟದ ನಾಯಕಿ ಎಂದು ಒಪ್ಪಿಕೊಂಡರೆ ಯಾವುದೇ ಬದಲಾವಣೆಯಾಗುವುದಿಲ್ಲ ಎಂದು ಲಾಲು ಪ್ರಸಾದ್ ಹೇಳಿದ್ದಾರೆ.

### ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಸ್ಪರ್ಧೆ

# ಅವಕಾಶಗಳೊಂದಿಗೆ ಉತ್ತಮ ಭವಿಷ್ಯ ಹೊಂದಿ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಪ್ರತಿಯೊಬ್ಬರಲ್ಲಿರುವ ಪ್ರತಿಭೆಯನ್ನು ವ್ಯಕ್ತಪಡಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.



ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಗದಗ ಇವರ ಸಹಯೋಗದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಸ್ಪರ್ಧೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಜೀವಿಸುತ್ತಿದ್ದು, ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಿಕ್ಷಣ ಎಂದರೆ ಕೇವಲ ಪಠ್ಯ-ಪುಸ್ತಕ ಓದುವುದು, ಪರೀಕ್ಷೆ ಎದುರಿಸುವುದು ಎಂದು ಅರ್ಥ ಅಲ್ಲ. ನೀವು ಉತ್ತಮ ಸಮಾಜ, ವ್ಯಕ್ತಿತ್ವ ನಿರ್ಮಾಣ ಮಾಡುವುದೇ ಶಿಕ್ಷಣದ ಗುರಿ ಆಗಬೇಕು. ಮುಂದೊಂದು ದಿನ ಉನ್ನತವಾದ ಸ್ಥಾನ ಅಲಂಕರಿಸಲು ಈಗಿನಿಂದಲೇ ತಾವು ಅಚಲ ನಿರ್ಧಾರದೊಂದಿಗೆ ಓದಿನ ಕಡೆ, ಅಭ್ಯಾಸದ ಕಡೆ ಗಮನ ಕೊಡಬೇಕು ಎಂದರು.

ನೋಡಲ್ ಅಧಿಕಾರಿ ಶಿವಕುಮಾರ ಕುರಿ ಪ್ರಸ್ತಾವಿಕವಾಗಿ ಮಾತನಾಡಿ, ಪ್ರತಿ ವರ್ಷ ಜನವರಿ 25ರಂದು ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಆಚರಿಸುತ್ತೇವೆ. ವಿದ್ಯಾರ್ಥಿಗಳು ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರವನ್ನು ಕಟ್ಟುವ ನಿಟ್ಟಿನಲ್ಲಿ ಈಗಿನಿಂದಲೇ ಚುನಾವಣೆ, ಮತದಾನದ ಮಹತ್ವವನ್ನು ತಿಳಿಯಬೇಕೆಂಬುದು ಇದರ ಆಶಯ ಎಂದರು.

ಪ್ರಬಂಧ (ಕನ್ನಡ ಹಾಗೂ ಆಂಗ್ಲ ಭಾಷೆಯಲ್ಲಿ) ಸ್ಪರ್ಧೆಗಳು, ಭಿತ್ತಿ ಚಿತ್ರ ಹಾಗೂ ರಸಪ್ರಶ್ನೆ ಸ್ಪರ್ಧೆಗಳು ಜರುಗಿದವು. ರಸಪ್ರಶ್ನೆಯು ಥಟ್ ಅಂತ ಹೇಳಿ ಮಾದರಿಯಲ್ಲಿ ನಡೆದಿರುವುದು ಎಲ್ಲಾ ವಿದ್ಯಾರ್ಥಿಗಳ ಮತ್ತು ಪಾಲಕರ ಗಮನ ಸೆಳೆಯಿತು. ನಿರ್ಣಾಯಕರಾಗಿ ನುರಿತ ಶಿಕ್ಷಕರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಎಂ.ಎ. ಯರಗುಡಿ ನಿರೂಪಿಸಿದರು. ಎಂ.ಬಿ. ಕರಡ್ಡಿ ವಂದಿಸಿದರು.

**ಸ್ಪರ್ಧೆಗಳ ಫಲಿತಾಂಶದ ವಿವರ**

ಪ್ರಬಂಧ ಸ್ಪರ್ಧೆಯಲ್ಲಿ (ಕನ್ನಡ) ಪೂರ್ಣಿಮಾ ಅನವಾಲ ಪ್ರಥಮ, ಸೌಮ್ಯ ಕಿತ್ತೂರು ದ್ವಿತೀಯ, ಮಂಜುಳಾ ಹಿರೇಮಠ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಬಂಧ ಸ್ಪರ್ಧೆಯಲ್ಲಿ (ಇಂಗ್ಲಿಷ್) ಶ್ರೇಯಾ ಚಿಕ್ಕರಡ್ಡಿ ಪ್ರಥಮ, ನಿವೇದಿತಾ ಹಂದ್ರಾಳ ದ್ವಿತೀಯ, ಸುಮಲತಾ ಕಬ್ಬೇರಳ್ಳಿ ತೃತೀಯ ಸ್ಥಾನ ಪಡೆದಿದ್ದಾರೆ.

ರಸಪ್ರಶ್ನೆ ಸ್ಪರ್ಧೆಯಲ್ಲಿ ರೇವಂತರೆಡ್ಡಿ ಮುಂಡರಗಿ ಹಾಗು ಶಾಂತಮ್ಮ ಸಜ್ಜನರ ಪ್ರಥಮ, ಶಿದ್ಧಮ್ಮ ಹಳೆಮನಿ, ಸೌಂದರ್ಯ ಮನವಾಚಾರಿ ದ್ವಿತೀಯ, ನಿಖಿತಾ ಮಾಲಿಪಾಟೀಲ, ಕವಿತಾ ತಳವಾರ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

ಭಿತ್ತಿ ಚಿತ್ರ ಸ್ಪರ್ಧೆಯಲ್ಲಿ ಈಶ್ವರ ಹೂಗಾರ ಪ್ರಥಮ, ಖದಿಜಾ ಸೂರಣಗಿ ದ್ವಿತೀಯ, ಕೌಸರಬಾನು ನದಾಫ್ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

# ಸ್ವಯಂ ಉದ್ಯೋಗಕ್ಕೂ ಆದ್ಯತೆ ನೀಡಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಂದಿನ ದಿನಗಳಲ್ಲಿ ಎಲ್ಲರಿಗೂ ಉದ್ಯೋಗ, ಅದರಲ್ಲೂ ಸರಕಾರಿ ಉದ್ಯೋಗಗಗಳು ದೊರೆಯುವದು ವಿರಳ. ಅದಕ್ಕಾಗಿ ಸ್ವಯಂ ಉದ್ಯೋಗಗಳಿಗೂ ಯುವಕ, ಯುವತಿಯರು ಆದ್ಯತೆ ನೀಡಿ. ಅದರಲ್ಲಿಯೇ ಕೌಶಲ್ಯವನ್ನು ಹೊಂದಿ ಯಶಸ್ವಿಯಾಗಬೇಕು ಎಂದು ಶಾರದಾ ಮಹಾಂತಶೆಟ್ಟರ ಹೇಳಿದರು.

ಅವರು ಪಟ್ಟಣದ ವಿಶ್ವ ಗ್ರಾಮೀಣ ಅಭಿವೃದ್ಧಿ ಮತ್ತು ತರಬೇತಿ ಸಂಸ್ಥೆಯ ವತಿಯಿಂದ ಮಹಿಳೆಯರಿಗಾಗಿ ಹಮ್ಮಿಕೊಂಡಿದ್ದ ವಿವಿಧ ತರಬೇತಿಗಳ ಮುಕ್ತಾಯ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಬಸವರಾಜ ಸಂಗಪ್ಪಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿ, ಸರಕಾರದ ಅನೇಕ ಉಚಿತ ತರಬೇತಿ ಕಾರ್ಯಕ್ರಮಗಳನ್ನು ನಮ್ಮ ಸಂಸ್ಥೆಯ ವತಿಯಿಂದ ಯಶಸ್ವಿಯಾಗಿ ನಡೆಸಲಾಗುತ್ತಿದ್ದು, ಸ್ವಯಂ ಉದ್ಯೋಗ ಕೈಗೊಳ್ಳುವವರಿಗೆ ತರಬೇತಿ ಹೆಚ್ಚು ಅನುಕೂಲವಾಗಲಿದೆ ಎಂದರು. ಅತಿಥಿಗಳಾಗಿ ಜಯಶ್ರೀ ಮಳ್ಳಿಗೇರಿ, ಲತಾ ತಟ್ಟಿ, ಲಕ್ಷ್ಮಮ್ಮ ಆದಿ ಮುಂತಾದವರು ಪಾಲ್ಗೊಂಡಿದ್ದರು. ಮೇಕಪ್ ಕ್ಲಾಸ್ ಶಿಕ್ಷಕಿ ಶಮೀನಾಬಾನು ಲಕ್ಷ್ಮೇಶ್ವರ ಅವರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ಪ್ರಾಂಶುಪಾಲರಾದ ಗೌರಿ ಸಂಗಪ್ಪಶೆಟ್ಟರ ಸ್ವಾಗತಿಸಿದರು. ಅಂಕಿತಾ ಅರಳಿ ನಿರೂಪಿಸಿದರು. ಚಿತ್ರಾ ಯಾಳಗಿ ವಂದಿಸಿದರು.

# ಮಕ್ಕಳ ಕಲಿಕೆಯಲ್ಲಿ ತಾಯಂದಿರ ಪಾತ್ರ ಮಹತ್ವದ್ದು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿಮ್ಮ ಮಕ್ಕಳು ಶಾಲೆಯಲ್ಲಿ ಎಷ್ಟು ಹೊತ್ತು ಇರುತ್ತಾರೋ ಅದಕ್ಕಿಂತಲೂ ಹೆಚ್ಚಿನ ಸಮಯವನ್ನು ಅವರು ಮನೆಯಲ್ಲಿ ಕಳೆಯುತ್ತಾರೆ. ಅವರು ಮನೆಯಲ್ಲಿ ಏನು ಮಾಡುತ್ತಾರೆ ಎಂಬುದರ ಮೇಲೆ ನಿಮ್ಮ ನಿಗಾ ಇರಬೇಕು. ನಿಮ್ಮ ಮಕ್ಕಳ ಕಲಿಕೆಯಲ್ಲಿ ನಿಮ್ಮ ಪಾತ್ರ ಮಹತ್ವದ್ದಿದೆ ಎಂದು ಮುಖ್ಯ ಶಿಕ್ಷಕಿ ವಿ.ಎಸ್. ಚಲವಾದಿ ಹೇಳಿದರು.

ಸಮೀಪದ ಕೋಟುಮಚಗಿ ಗ್ರಾಮದ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ಜರುಗಿದ ತಾಯಂದಿರ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ವಿದ್ಯಾರ್ಥಿಯ ಜೀವನದಲ್ಲಿ 10ನೇ ತರಗತಿ ಮಹತ್ವದ್ದಾಗಿದೆ. ವಾರ್ಷಿಕ ಪರೀಕ್ಷೆಗಳು ಹತ್ತಿರವಾಗುತ್ತಿರುವ ಈ ದಿನಗಳಲ್ಲಿ ನೀವು ನಿಮ್ಮ ಮಕ್ಕಳ ಶಿಕ್ಷಣ ಪ್ರಗತಿಯ ಬಗ್ಗೆ ಗಮನ ನೀಡಬೇಕು. ಶಾಲೆಯಲ್ಲಿ ನಡೆಯುವ ವಿಶೇಷ ವರ್ಗಗಳಿಗೆ ನಿಮ್ಮ ಮಕ್ಕಳು ಕಡ್ಡಾಯವಾಗಿ ಹಾಜರಿರುವಂತೆ ನೋಡಿಕೊಳ್ಳಬೇಕಾದ ಜವಾಬ್ದಾರಿ ನಿಮ್ಮ ಮೇಲಿದೆ. ಆದ್ದರಿಂದ ನೀವು ನಿಮ್ಮ ಮಕ್ಕಳಿಗಿಂತ ಹೆಚ್ಚು ಜಾಗರೂಕರಾಗಿದ್ದು, ಅವರ ವಿದ್ಯಾಭ್ಯಾಸದಲ್ಲಿ ನಿಮ್ಮದೇ ಆದ ಪಾತ್ರವನ್ನು ವಹಿಸಬೇಕಿದೆ ಎಂದು ತಿಳಿಸಿದರು.

ಪಾಲಕರ ಪ್ರತಿನಿಧಿ ಸಿ.ವಿ. ಗೊಡಚಪ್ಪನವರ ಮತ್ತು ಆರ್.ಆರ್. ದಂಡಿನಮಠ ವೇದಿಕೆಯ ಮೇಲಿದ್ದರು. ಟಿ.ಜಿ. ಕಂಬಾಳಿಮಠ ಸ್ವಾಗತಿಸಿದರು. ಶಿಕ್ಷಕಿ ಆರ್.ಡಿ. ಜಗ್ಗಲ ನಿರೂಪಿಸಿದರು. ಆರ್.ಎಸ್. ನೀರಲಗಿ ವಂದಿಸಿದರು.

## ಅಮೂಲ್ಯವಾದ ವ್ಯಕ್ತಿಯನ್ನು ನಾವು ಕಳೆದುಕೊಂಡಿದ್ದೇವೆ: ಎಸ್ ಎಮ್ ಕೃಷ್ಣ ನಿಧನಕ್ಕೆ ಹೆಚ್ ಕೆ ಪಾಟೀಲ ಸಂತಾಪ

▶▶ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಅಂದು ಅಧಿಕಾರದಲ್ಲಿದ್ದ ಬಿ.ಜೆ.ಪಿ ನಾಯಕರನ್ನು ಮನವೊಲಿಸುವಲ್ಲಿ ಯಶಸ್ವಿಯಾಗಿದ್ದರು. ನಂತರ ಸರ್ವೋಚ್ಚ ನ್ಯಾಯಾಲಯದಿಂದ ನ್ಯಾಯಾಂಗ ನಿಂದನೆಯನ್ನು ಅಂದಿನ ಜಲಸಂಪನ್ಮೂಲ ಸಚಿವನಾಗಿದ್ದ ನನ್ನೊಂದಿಗೆ ಎದುರಿಸಿದರು. ಕೃಷ್ಣ ಕಾವೇರಿ ಜಲವಿವಾದಗಳಲ್ಲಿ, ಗಡಿವಿವಾದಗಳಲ್ಲಿ ರಾಜ್ಯದ ಹಿತವೇ ಶ್ರೇಷ್ಠ ಎನ್ನುವ ನಿಲುವನ್ನು ಸದಾವಕಾಲ ಪಾಲಿಸಿದವರು. ಕರ್ನಾಟಕವನ್ನು ಮಾಹಿತಿ ತಂತ್ರಜ್ಞಾನದ ಕಣಜ ಮತ್ತು ಕೇಂದ್ರಸ್ಥಾನವನ್ನಾಗಿ ಪರಿವರ್ತಿಸುವಲ್ಲಿ, ಬೆಂಗಳೂರನ್ನು ಭಾರತದ ಸಿಲಿಕಾನ್ ವ್ಯಾಲಿಯನ್ನಾಗಿ ಬದಲಾವಣೆಗೆ ಅಪಾರ ಕೊಡುಗೆ ನೀಡಿದ ಎಸ್.ಎಂ. ಕೃಷ್ಣ ಸಭ್ಯ, ಸುಸಂಸ್ಕೃತ ಮತ್ತು ಮುತ್ಸದ್ದಿ ಶ್ರೇಷ್ಠ ರಾಜಕಾರಣಿಗಳ ಸಾಲಿನ ಮುಂಚೂಣಿಯಲ್ಲಿದ್ದವರು.

ಅಂದು 1999ರಲ್ಲಿ ಉತ್ತರ ಕರ್ನಾಟಕದಿಂದ ಆಯ್ಕೆಯಾಗಿದ್ದ 48 ಶಾಸಕರು ಎಸ್.ಎಂ.ಕೃಷ್ಣ ಅವರಿಗೆ ಶಕ್ತಿಯಾಗಿ ಎಸ್.ಎಂ.ಕೃಷ್ಣ ಅವರ ರಾಜಕೀಯ ಜೀವನದ ಬಹುದೊಡ್ಡ ಕೊಡುಗೆಯಾಗಿದ್ದಿತು. ನನ್ನನ್ನು ಹಾಗೂ ನನ್ನ ಸಹೋದರ ಡಿ.ಆರ್.ಪಾಟೀಲ ಅವರನ್ನು ಮಕ್ಕಳಂತೆ ಭಾವಿಸಿ ನಮ್ಮ ಏಳಿಗೆಯನ್ನು ಬಯಸಿದ ಎಸ್.ಎಂ ಕೃಷ್ಣ ನನ್ನನ್ನು ತಮ್ಮ ಸಚಿವ ಸಂಪುಟದಲ್ಲಿ ಜಲಸಂಪನ್ಮೂಲ ಇಲಾಖೆಯ ಸಚಿವನನ್ನಾಗಿ ಅಧಿಕಾರ ನೀಡಿದ ಕ್ಷಣಗಳನ್ನು ನಾನು ಕೃತಜ್ಞತೆಯಿಂದ ಸ್ಮರಿಸುತ್ತೇನೆ.

ಅತ್ಯಂತ ಮಹತ್ವದ ಕಾಲಘಟ್ಟದಲ್ಲಿ ನೀರಾವರಿ ಯೋಜನೆಗಳಿಗೆ ಅದರಲ್ಲೂ ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳಿಗೆ ಕೃಷ್ಣಾ ಮೇಲ್ದಂಡೆ ಯೋಜನೆಯಂತ ಮಹತ್ವಾಕಾಂಕ್ಷಿ ಯೋಜನೆಗೆ ಆಮೆ ವೇಗವನ್ನು ತಪ್ಪಿಸಿ ಜಿಂಕೆ ವೇಗವನ್ನು ಒದಗಿಸಿದ ಖ್ಯಾತಿಗೆ ಪಾತ್ರರಾದವರು. ಕರ್ನಾಟಕದ ಮಹತ್ವದ ಜಲವಿವಾದಗಳ ಸಂದರ್ಭದಲ್ಲಿ ದೃಢವಾದ ನಿಲುವನ್ನು ಕರ್ನಾಟಕದ ಧ್ವನಿಯಾಗಿ ಗಟ್ಟಿಯಾಗಿ ಪ್ರತಿಪಾದಿಸುವಲ್ಲಿ ಕರ್ನಾಟಕದ ನಾಗರೀಕರಿಗೆ ಹೆಗಲಿಗೆ-ಹೆಗಲು ಕೊಟ್ಟವರು.

ಶ್ರೀ ಎಸ್.ಎಂ. ಕೃಷ್ಣ ಅವರ ಸಂಪುಟದಲ್ಲಿ ಜಲಸಂಪನ್ಮೂಲ ಸಚಿವನಾಗಿ ಸೇವೆ ಸಲ್ಲಿಸುವ ಸೌಭಾಗ್ಯ ನನ್ನದಾಗಿತ್ತು. ಆ ಸಂದರ್ಭದಲ್ಲಿ ನೆನೆಗುದಿಗೆ ಬಿದ್ದಿದ್ದ ಮಹದಾಯಿ ಯೋಜನೆಯನ್ನು ಮಾರ್ಪಡಿಸಿ ಕಳಸಾ-ಬಂಡೂರಿ ಯೋಜನೆಗಳನ್ನಾಗಿ ಅತ್ಯಂತ ಚಾಕಚಕ್ಯತೆಯಿಂದ ಜಲಸಂಪನ್ಮೂಲ ಇಲಾಖೆ ಸಲ್ಲಿಸಿದ್ದ ಯೋಜನಾ ವರದಿಯನ್ನು ಅಂಗೀಕರಿಸಿದ ಮತ್ತು ಆ ಕಾರ್ಯಕ್ಕೆ ಚಾಲನೆ ನೀಡಿದ ಎಸ್.ಎಂ. ಕೃಷ್ಣ ಸಚಿವ ಸಂಪುಟದ ಕೊಡುಗೆಯನ್ನು ನಾನು ಕೃತಜ್ಞತೆಯನ್ನು ಸ್ಮರಿಸುತ್ತೇನೆ.

ಎಸ್.ಎಂ. ಕೃಷ್ಣ ಒಬ್ಬ ಮುತ್ಸದ್ದಿ ರಾಜಕಾರಣಿಯಾಗಿ, ಶಾಸಕನಾಗಿ, ವಿಧಾನಸಭೆಯ ಅಧ್ಯಕ್ಷರಾಗಿ, ಮುಖ್ಯಮಂತ್ರಿಯಾಗಿ, ಕೇಂದ್ರದ ಸಚಿವರಾಗಿ, ಕರ್ನಾಟಕ ವಿಧಾನ ಮಂಡಳದ ಎರಡೂ ಸದನಗಳ ಸದಸ್ಯರಾಗಿ ಸಂಸತ್ತಿನ ಎರಡೂ ಸದನಗಳ ಸದಸ್ಯರಾಗಿ ಸಲ್ಲಿಸಿದ ಸೇವೆ ಅನುಪಮವಾದದ್ದು. ಕರ್ನಾಟಕ ಕಂಡ ಅಪರೂಪದ ಹಿರಿಯ ಚೈತನ್ಯವೊಂದು ಇಂದು ನಮ್ಮನ್ನು ಅಗಲಿ ನಾಡನ್ನು ಬಡವಾಗಿಸಿದೆ. ರಾಷ್ಟ್ರಕ್ಕೆ ತುಂಬಲಾರದ ಹಾನಿಯಾಗಿದೆ. ಶ್ರೀಯುತ ಎಸ್.ಎಂ.ಕೃಷ್ಣ ಅವರ ನಿಧನದಿಂದ ಮಡುಗಟ್ಟಿರುವ ಶೋಕವನ್ನು ಶಕ್ತಿಯನ್ನು ಎಲ್ಲರಿಗೂ ನೀಡಲಿ ಮತ್ತು ಅವರ ಆತ್ಮಕ್ಕೆ ಚಿರಶಾಂತಿಯನ್ನು ದಯಾಘನನಾದ ಭಗವಂತನು ದಯಪಾಲಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ.

### ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ಸನದು ಪ್ರದಾನ ದಿನಾಚರಣೆ

# ರೋಟರಿ ಕ್ಲಬ್‌ನಿಂದ ಸಮಾಜಮುಖಿ ಕಾರ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನಲ್ಲಿ ಸ್ವಾತಂತ್ರ್ಯ ಪೂರ್ವದಲ್ಲೇ ಗದಗ-ಬೆಟಗೇರಿ ರೋಟರಿ ಕ್ಲಬ್ ಅಸ್ತಿತ್ವ ಪಡೆದುಕೊಂಡಿದ್ದು, ಅಂತಾರಾಷ್ಟ್ರೀಯ ಸೇವಾ ಸಂಸ್ಥೆಯಾದ ಈ ಕ್ಲಬ್ ಗದಗ ಪರಿಸರದಲ್ಲಿ ಕಳೆದ 79 ವರ್ಷಗಳಿಂದ ಸಮಾಜಮುಖಿಯಾಗಿ, ಜನಮುಖಿಯಾಗಿ ಕಾರ್ಯ ಮಾಡಿದ ಹಿರಿಯ ಸಂಸ್ಥೆಯಾಗಿದೆ ಎಂದು ರೋಟರಿ ಜಿಲ್ಲೆ 3170ದ ಗವರ್ನರ್ ಅಶೋಕ ನಾಯಕ ಹೇಳಿದರು. ಅವರು ಗದಗ-ಬೆಟಗೇರಿ ರೋಟರಿ ಕ್ಲಬ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕ್ಲಬ್‌ನ 80ನೇ ಸನದು ಪ್ರದಾನ ದಿನಾಚರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ, ಬಡವರಿಗಾಗಿ ಕಣ್ಣಿನ ಆಸ್ಪತ್ರೆ, ಅಂಧ ವಿದ್ಯಾರ್ಥಿಗಳಿಗೆ ಕೃತಕ ಕಣ್ಣಿನ ಚಾಳೀಸ್‌ಗಳನ್ನು ವಿತರಿಸಿದ್ದು ಹೆಮ್ಮೆಯ ವಿಷಯವಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಉತ್ತಮ ಸಾಮಾಜಿಕ ಕೆಲಸಗಳ ಯೋಜನೆಗಳನ್ನು ಹಾಕಿಕೊಂಡು ಯಶಸ್ವಿಗೊಳಿಸಿರಿ ಎಂದರು. ವಿಶ್ವನಾಥ ಯಳಮಲಿ, ಡಾ. ಉಮೇಶ ಪುರದ ಪರಿಚಯಿಸಿದರು. ಶ್ರೀಧರ ಸುಲ್ತಾನಪೂರ ಸಂಸ್ಥೆಯು 79 ವರ್ಷಗಳಲ್ಲಿ ಕೈಗೊಂಡ ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಗಳನ್ನು ಪ್ರಸ್ತುತಪಡಿಸಿ ಸಂಸ್ಥೆಯು ಮುಂಬರುವ ದಿನಗಳಲ್ಲಿ ಕೈಗೊಳ್ಳುವ ಕಾರ್ಯಗಳ ಸಂಕ್ಷಿಪ್ತ ವರದಿಯನ್ನು ತಿಳಿಸಿದರು.




ರೋಟರಿ ಸಂಸ್ಥೆಯ 80ನೇ ವರ್ಷದ ಹುಟ್ಟು ಹಬ್ಬವನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಡಾ. ಆರ್.ಬಿ. ಉಪ್ಪಿನ ಸ್ವಾಗತಿಸಿದರು. ಮಹೇಶ ಕುಂದ್ರಾಳಹಿರೇಮಠ ಪ್ರಾರ್ಥಿಸಿದರು. ರೋಟರಿ ಸಂಸ್ಥೆ ಗಜೇಂದ್ರಗಡ ಸಂಸ್ಥೆಯು ರಜತಮಹೋತ್ಸವ ಆಚರಿಸುತ್ತಿರುವ ಸಂದರ್ಭದಲ್ಲಿ ಆ ಕ್ಲಬ್‌ನ ಅಧ್ಯಕ್ಷ ಮಾರುತಿ ನಾವಡೆ ಅವರನ್ನು ಸನ್ಮಾನಿಸಲಾಯಿತು. ಪಶು ವೈದ್ಯಕೀಯ ಕಾಲೇಜಿನ ಪ್ರಾಧ್ಯಾಪಕ ಡಾ. ನವೀನ ಟಿಕಾರೆ ನೂತನ ಸದಸ್ಯರಾಗಿ ಸೇರಿದರು. 80ನೇ ಸನದು ಪ್ರದಾನ ದಿನಾಚರಣೆಯ ಅಂಗವಾಗಿ ನಡೆದ ಚೆಸ್ ಹಾಗೂ ಕೇರಮ್ ಆಟದಲ್ಲಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಕಾಯಕ್ರಮದಲ್ಲಿ ಡಾ. ರಾಜಶೇಖರ ಬಳ್ಳಾರಿ, ಅಶೋಕ ಅಕ್ಕಿ, ಡಾ. ಜಿ.ಬಿ. ಪಾಟೀಲ, ಅನಿಲಕುಮಾರ ಹಂದ್ರಾಳ, ಅಕ್ಷಯ ಶೆಟ್ಟಿ, ಮಹಾಂತೇಶ ಬಾತಾಖಾನಿ, ಡಾ. ಪ್ರದೀಪ ಉಗಲಾಟ, ಕಾರ್ತಿಕ ಮುತ್ತಿನಪೆಂಡಿಮಠ, ಸುರೇಶ ಕುಂಬಾರ, ನರೇಶ ಜೈನ, ಚಂದ್ರಮೌಳಿ ಜಾಲಿ, ರಮೇಶ ಇಟಗಿ, ಡಾ. ಕಮಲಾಕ್ಷಿ ಅಂಗಡಿ ಮುಂತಾದವರು ಉಪಸ್ಥಿತರಿದ್ದರು. ವೀಣಾ ತಿರ್ಲಾಪೂರ ಹಾಗೂ ಬಾಲಕೃಷ್ಣ ಕಾಮತ್ ನಿರೂಪಿಸಿದರು. ಕಾರ್ಯದರ್ಶಿ ಸಂತೋಷ ಅಕ್ಕಿ ವಂದಿಸಿದರು.

ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಜಿ.ಬಿ. ಬಿಡಿನಹಾಳ ಅವರನ್ನು ಸಂಸ್ಥೆಯ ಪರವಾಗಿ ಸನ್ಮಾನಿಸಲಾಯಿತು. ಕಾರ್ಯಕ್ರಮದ ಆತಿಥ್ಯ ವಹಿಸಿದ್ದ ಡಾ. ಪ್ರಕಾಶ ಕೊಲೋಳಗಿ, ಡಾ. ವ್ಹಿ.ಸಿ. ಕಲ್ಮಠ ಹಾಗೂ ಹೆಚ್.ಎಸ್. ಪಾಟೀಲ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

### 'ವಿದ್ಯಾರ್ಥಿಗಳ ನಡೆ ಕೃಷಿ ಕಡೆ' ಕಾರ್ಯಕ್ರಮದಲ್ಲಿ ವೀರೇಶ ನೇಗಲಿ

# ವಿದ್ಯಾರ್ಥಿಗಳು ಕೃಷಿಯೆಡೆಗೆ ಮನಸ್ಸು ಮಾಡಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ/ಬೆಂಗಳೂರು**

ರೈತ ನಮ್ಮ ಜೀವದ ಮತ್ತು ಜೀವನದ ಉಸಿರು. ಅವನಿಲ್ಲದಿದ್ದರೆ ನಾವು ತುತ್ತು ಅನ್ನಕ್ಕಾಗಿ ಪರದಾಡಬೇಕಾಗುತ್ತದೆ. ಈಗ ಕೃಷಿ ಮಾಡಲು ಯಾರೂ ಒಪ್ಪುತ್ತಿಲ್ಲ. ಎಲ್ಲರಿಗೂ ನೌಕರಿಯೇ ಮುಖ್ಯವಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಈಗಿನಿಂದಲೇ ಕೃಷಿಯೆಡೆಗೆ ಆಸಕ್ತಿ ಬೆಳೆಸಿಕೊಂಡು ಕೃಷಿಕರಾಗಲು ಮನಸ್ಸು ಮಾಡಬೇಕೆಂದು ಸಮೀಪದ ಸಾವಯವ ಕೃಷಿಕ ಕೋಟುಮಚಗಿ ಗ್ರಾಮದ ವೀರೇಶ ಎಸ್.ನೇಗಲಿ ಹೇಳಿದರು. ಬೆಂಗಳೂರಿನ ಆನೇಕಲ್ ತಾಲ್ಲೂಕಿನ ಬೊಮ್ಮಸಂದ್ರ ಸಮೀಪದ ಗಾನಹಳ್ಳಿಯ ಬಿ.ಎಸ್. ಕಾರ್ಮೆಲ್ ಶಾಲೆಯಲ್ಲಿ ನಡೆದ 'ವಿದ್ಯಾರ್ಥಿಗಳ ನಡೆ ಕೃಷಿ ಕಡೆ' ಕಾರ್ಯಕ್ರಮದಲ್ಲಿ ಅವರು ಸಾವಯವ ಕೃಷಿಯ ಕುರಿತು ಒಂದು ದಿನದ ಕಾರ್ಯಾಗಾರ ನಡೆಸಿ ಮಾತನಾಡಿದರು.

ಶಿಕ್ಷಣದಲ್ಲಿ ಸಾವಯವ ಕೃಷಿಗೆ ಪ್ರಥಮ ಆದ್ಯತೆ ನೀಡಬೇಕಾಗಿದೆ. ವಿದ್ಯಾರ್ಥಿಗಳು ಪ್ರಕೃತಿ ಮಡಿಲಿಗೆ ಹಿಂತಿರುಗುವಂತೆ ಪ್ರೇರೇಪಿಸಬೇಕಾಗಿದೆ. ಉತ್ತಮ ಶಿಕ್ಷಣ ಪಡೆದ ನಂತರ ಆಸ್ತಿ ಮಾಡುವ ಭರಾಟೆಯಲ್ಲಿ ಹಾಗೂ ಹಣದ ವ್ಯಾಮೋಹದಲ್ಲಿ ತೇಲುತ್ತಿರುವ ಯುವ ಜನಾಂಗಕ್ಕೆ ಉತ್ತಮ ಆರೋಗ್ಯ, ನೆಮ್ಮದಿ, ಪ್ರಕೃತಿ, ಮಣ್ಣು ಹಾಗೂ ಕೃಷಿ ಎನ್ನುವ ನಿಜವಾದ ಜಗತ್ತಿಗೆ ಹಿಂತಿರುಗಿಸುವ ಅನಿವಾರ್ಯತೆ ಇದೆ. ನಾವು ಕಲಿತ ಶಿಕ್ಷಣ ನಮ್ಮ ದೇಶಕ್ಕೆ, ನಮ್ಮ ಆರೋಗ್ಯಕ್ಕೆ ಉಪಯೋಗವಾದರೆ ಮಾತ್ರ ಅದರ ಮೌಲ್ಯ ಹೆಚ್ಚುತ್ತದೆ. ಇಲ್ಲವಾದರೆ ನೂರಾರು ವಿಕೋಪಕ್ಕೆ ಕಾರಣರಾಗುತ್ತೇವೆ ಎಂದರು.



ಶಾಲೆಯ ಪ್ರಾಚಾರ್ಯೆ ಜ್ಯೋತಿಗೌಡ ಕೆ.ಎಸ್. ಮಾತನಾಡಿ, ಉತ್ತರ ಕರ್ನಾಟಕದ ವೀರೇಶ ನೇಗಲಿಯವರು ಸಾವಯವ ಕೃಷಿಯಲ್ಲಿ ಅಪಾರ ಪಾಂಡಿತ್ಯ ಹೊಂದಿದ್ದಾರೆ. ಅವರ ಕಾರ್ಯಾಗಾರದಿಂದ ನಮ್ಮ ಮಕ್ಕಳಿಗೆ ಸ್ಫೂರ್ತಿ ಸಿಕ್ಕಿದೆ ಎಂದರು.

ಈ ವೇಳೆ ಸಾವಯವ ಕೃಷಿ, ಫಲವತ್ತಾದ ಮಣ್ಣಿನ ಗುಣಮಟ್ಟ ಹಾಗೂ ರಾಸಾಯನಿಕ ಗೊಬ್ಬರ ಬಳಕೆ ಮಾಡಿದ ಮಣ್ಣಿನ ಗುಣಮಟ್ಟದ ಕುರಿತು, ಧಾನ್ಯಗಳ ಕುರಿತು, ಬೆಳೆಗಳ ಕುರಿತು, ಸ್ವಾಭಾವಿಕ ನೀರಿನ ಕುರಿತು, ದೇಶಿ ಗೋವಿನ ಸಗಣಿ, ಗಂಜಲು ಹಾಗೂ ಇತರೆ ವಸ್ತುಗಳ ಕುರಿತು ಪ್ರಾತ್ಯಕ್ಷಿಕೆ ನೀಡಿದರು. ಶಾಲೆಯ ಮುಖ್ಯ ಶಿಕ್ಷಕಿ ಗೀತಾ ರಕರಡ್ಡಿ, ಸಹ ಶಿಕ್ಷಕರಾದ ಶಿವಲಿಂಗಪ್ಪ ಎಂ, ಗಗನ್ ಎಂ, ತಾವೇರಪ್ಪ ಎಲ್, ಭಾಗ್ಯಲಕ್ಷ್ಮೀ ಕೆ.ಆರ್. ಇದ್ದರು.

## ಹಿರಿಯ ರಾಜಕಾರಣಿ ಎಸ್.ಎಂ. ಕೃಷ್ಣ ಅಗಲಿಕೆಗೆ ತೋಂಟದ ಶ್ರೀಗಳ ಸಂತಾಪ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಅತ್ಯಂತ ಸುಶಿಕ್ಷಿತ ಮುಖ್ಯಮಂತ್ರಿಗಳಾಗಿದ್ದ ಡಾ. ಎಸ್.ಎಂ. ಕೃಷ್ಣ ಅವರು ನಿಧನರಾದುದು ನೋವಿನ ಸಂಗತಿ. ಅವರು ಮುಖ್ಯ ಮಂತ್ರಿಗಳಾಗಿ, ವಿದೇಶಾಂಗ ಸಚಿವರಾಗಿ ನಾಡು ಮತ್ತು ರಾಷ್ಟ್ರಕ್ಕೆ ಅಪ್ರತಿಮ ಸೇವೆ ಸಲ್ಲಿಸಿದ್ದರು. ಜಾತಿ, ಮತ, ಪಂಥಗಳ ಭೇದವಿಲ್ಲದೆ ಸರ್ವರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಿದ, ಸಾಮಾಜಿಕ ನ್ಯಾಯದ ಪರ ನಿಂತು ಜನಕಲ್ಯಾಣವನ್ನು ಸಾಧಿಸಿದ ಅವರು ಇಂದು ನಮ್ಮನ್ನು ಅಗಲಿದ್ದಾರೆ.

ನಾಡು ಮತ್ತು ದೇಶಕ್ಕೆ ಇದು ತುಂಬಲಾಗದ ನಷ್ಟ ಎಂದು ಡಂಬಳ-ಗದಗ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಶಾಸಕರಾಗಿ, ಲೋಕಸಭೆ-ರಾಜ್ಯಸಭೆಗಳ ಸದಸ್ಯರಾಗಿ ನಿರಂತರ ರಾಜಕಾರಣದಲ್ಲಿದ್ದ ಎಸ್.ಎಂ. ಕೃಷ್ಣ ಅವರು ನೆರೆಯ ಮಹಾರಾಷ್ಟ್ರದ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದ್ದರು. ಕರ್ನಾಟಕದ ಐಟಿಬಿಟಿ ಕ್ಷೇತ್ರಕ್ಕೆ ಅವರ ಕೊಡುಗೆ ದೊಡ್ಡದು. ಸಾಹಿತ್ಯ, ಸಂಗೀತ, ಸಂಸ್ಕೃತಿ ಪ್ರಿಯರಾಗಿದ್ದ ಅವರು, ದೇಶ-ವಿದೇಶಗಳಲ್ಲಿ ಖ್ಯಾತಿಯನ್ನು ಪಡೆದಿದ್ದ ಮಹಾನ್ ಸಾಧಕರಾಗಿದ್ದರು.

ನಿಷ್ಕಳಂಕ ಚಾರಿತ್ರ್ಯ ಹೊಂದಿದ್ದ ಅಪ್ಪಟ ಪ್ರಬುದ್ಧ ರಾಜಕಾರಣಿ ಡಾ. ಎಸ್.ಎಂ. ಕೃಷ್ಣ ಅಭಿವೃದ್ಧಿಯ ಹರಿಕಾರರೆಂದೇ ಜನಮಾನಸದಲ್ಲಿ ಬಿಂಬಿತರಾಗಿದ್ದರು. ಕರ್ನಾಟಕದ ಜನ ಅವರನ್ನೆಂದೂ ಮರೆಯಲು ಸಾಧ್ಯವಿಲ್ಲ. ಅವರ ಆತ್ಮಕ್ಕೆ ಭಗವಂತ ಚಿರಶಾಂತಿಯನ್ನು ದಯಪಾಲಿಸಲಿ ಎಂದು ಶ್ರೀಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

## ತೆರಿಗೆ ವಸೂಲಾತಿ ಅಭಿಯಾನ ಯಶಸ್ವಿಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡಿಸೆಂಬರ್ 11, ಬುಧವಾರ 'ವಿಶೇಷ ತೆರಿಗೆ ವಸೂಲಾತಿ ಅಭಿಯಾನ' ಹಮ್ಮಿಕೊಳ್ಳಲಾಗಿದ್ದು, ತಾಲೂಕಿನ ಎಲ್ಲಾ ಗ್ರಾ.ಪಂ ಸಿಬ್ಬಂದಿಗಳು ಕೈಜೋಡಿಸಿ ಅಭಿಯಾನ ಯಶಸ್ವಿಗೊಳಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿಗೆ ಸಲ್ಲಿಕೆ ಆಗಬೇಕಾಗಿರುವ ತೆರಿಗೆಯಲ್ಲಿ ಶೇ.100ರಷ್ಟು ವಸೂಲಿ ಮಾಡುವುದು ಗ್ರಾ.ಪಂನ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಗ್ರಾ.ಪಂಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಕ್ರೋಢೀಕರಿಸಿಕೊಳ್ಳಲು ಕರವಸೂಲಾತಿ ಅಭಿಯಾನವನ್ನು ವಿಶೇಷ ಆಂದೋಲನವನ್ನಾಗಿ ತಾಲೂಕಿನಲ್ಲಿ ನಡೆಸಬೇಕಿದೆ. ಎಲ್ಲಾ ಗ್ರಾ.ಪಂಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಗ್ರಾ.ಪಂ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಡಿ.11ರಿಂದ ಡಿ.30ರವರೆಗೆ ಕಡ್ಡಾಯವಾಗಿ ತೆರಿಗೆ ವಸೂಲಾತಿ ಅಭಿಯಾನ ಹಮ್ಮಿಕೊಳ್ಳಬೇಕು.

ತಾಲೂಕಿನ ಎಲ್ಲಾ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಕರ ವಸೂಲಾತಿ ಅಭಿಯಾನವನ್ನು ಗ್ರಾ.ಪಂ ಕಾರ್ಯದರ್ಶಿಗಳು, ನೀರಗಂಟಿಗಳು ಸಿಬ್ಬಂದಿಗಳು ಜೊತೆ ಸೇರಿಕೊಂಡು ಮನೆಗಳು, ಅಂಗಡಿ ಮುಂಗಟ್ಟು, ಮಳಿಗೆಗಳಿಗೆ ತೆರಳಿ ಕರ ವಸೂಲಾತಿ ಕೈಗೊಂಡು ಅಭಿಯಾನ ಯಶಸ್ವಿಗೊಳಿಸಲು ಸಹಕಾರ ನೀಡಿದರೆ ನಿಗದಿತ ಗುರಿಯನ್ನು ಸಾಧಿಸಬಹುದು ಎಂದು ಅವರು ತಿಳಿಸಿದ್ದಾರೆ.

### ಬೀದಿ ನಾಯಿಗಳ ಹಾವಳಿಗೆ ಬೆದರಿದ ಜನತೆ । ಕಂಡಕಂಡಲ್ಲಿ ಮೇಲೆರಗುವ ಬೀದಿ ನಾಯಿಗಳು

# ಒಬ್ಬರೇ ಓಡಾಡಲೂ ಭಯದ ವಾತಾವರಣ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿ ತಾಲೂಕಿನಾದ್ಯಂತ ಬೀದಿ ನಾಯಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದ್ದು, ಬೀದಿ ನಾಯಿಗಳ ಹಾವಳಿಯಿಂದ ಮಕ್ಕಳು, ನಾಗರಿಕರು ಬೆಚ್ಚಿ ಬೀಳುವಂತಾಗಿದೆ. ಸಂಬಂಧಪಟ್ಟ ಪುರಸಭೆ/ಗ್ರಾ.ಪಂನವರು ಬೀದಿ ನಾಯಿಗಳ ನಿಯಂತ್ರಣಕ್ಕೆ ದಿಟ್ಟ ಕ್ರಮ ಕೈಗೊಳ್ಳಬೇಕೆಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

ಆರೋಗ್ಯ ಇಲಾಖೆಯ ಮಾಹಿತಿಯನ್ವಯ ಪ್ರಸಕ್ತ ವರ್ಷ ಜನವರಿಯಿಂದ ನವಂಬರ್‌ವರೆಗೆ ಲಕ್ಷ್ಮೇಶ್ವರ ಸೇರಿ ತಾಲೂಕಿನ ಯಳವತ್ತಿ, ಶಿಗ್ಲಿ, ಬಾಲೆಹೊಸೂರ, ಸೂರಣಗಿ ಸರ್ಕಾರಿ ಆಸ್ಪತ್ರೆಯಲ್ಲಿ 1507 ಜನರು ನಾಯಿ ಕಡಿತಕ್ಕೆ



> ನಾಯಿಗಳ ಹಾವಳಿಯಿಂದ ಸಾವಾಗಿವೆ. ನಿತ್ಯ ನೋವುಗಳು ಸಾಮಾನ್ಯ. ನಾಯಿಗಳ ಹಾವಳಿ ತಡೆಯುವಂತೆ ಸಾರ್ವಜನಿಕರು, ಸಂಘಟನೆಯವರು ಸಂಬಂಧಪಟ್ಟವರಿಗೆ ಮನವಿ ಸಲ್ಲಿಸುತ್ತಿದ್ದಾರೆ. ಇತ್ತೀಚೆಗೆ ಪಟ್ಟಣದ ಎಂವಿಬಿ ಕ್ರಿಯೇಟರ್ಸ್‌ನ ಯುವಕರ ತಂಡ ಬೀದಿ ನಾಯಿಗಳಿಗೆ ಹೊಳಪಿನ ಪಟ್ಟಿ ತೊಡಿಸುವ ಕಾರ್ಯ ಮಾಡಿದ್ದಾರೆ. ಹೈಕೋರ್ಟ್ ಸಹ ಬೀದಿ ನಾಯಿಗಳ ಸಂಖ್ಯೆ ಮತ್ತು ಉಪಟಳ ಹೆಚ್ಚುತ್ತಿರುವ ವಿಚಾರಕ್ಕೆ ರಾಜ್ಯ ಸರ್ಕಾರಕ್ಕೆ ಸೂಚಿಸಿದ್ದರೂ ಸ್ಥಳೀಯಾಡಳಿತಗಳು ಮಾತ್ರ ಗಮನ ಹರಿಸದಿರುವುದು ವಿಪರ್ಯಾಸದ ಸಂಗತಿ. ಪಟ್ಟಣದ ಜನರ, ಮಕ್ಕಳ ಜೀವದ ದೃಷ್ಟಿಯಿಂದ ಬೀದಿ ನಾಯಿಗಳ ಸಂಖ್ಯೆ ನಿಯಂತ್ರಣ ಮಾಡಬೇಕು.
>
> **– ಶರಣು ಗೋಡಿ, ನಾಗೇಶ ಅಮರಾಪುರ.**

ಚುಚ್ಚುಮದ್ದು ಪಡೆದಿದ್ದಾರೆ. ಯುವತಿಯೋರ್ವಳು ಮೃತಪಟ್ಟಿದ್ದಾಳೆ. ಇದನ್ನು ಹೊರತುಪಡಿಸಿ ಲೆಕ್ಕಕ್ಕೆ ಸಿಗದ ಎಷ್ಟೋ ಪ್ರಕರಣಗಳು ನಡೆದಿದ್ದು, ಇದು ನಾಯಿಗಳ ಉಪಟಳದ ತೀವ್ರತೆ ಎಷ್ಟಿದೆ ಎಂಬುದನ್ನು ಸಾಕ್ಷೀಕರಿಸುತ್ತದೆ.

ಅಕ್ಟೋಬರ್ ತಿಂಗಳಲ್ಲಿ ಬಟ್ಟೂರ ಗ್ರಾಮದಲ್ಲಿ ಹುಚ್ಚುನಾಯಿ ಕಡಿತದಿಂದ 19 ವರ್ಷದ ಯುವತಿ ರೇಬಿಸ್‌ನಿಂದ ಮೃತಪಟ್ಟ ಘಟನೆ ನಡೆದಿತ್ತು. ಇದರಿಂದ ಮುಂಜಾಗ್ರತಾ ಕ್ರಮವಾಗಿ ಗ್ರಾ.ಪಂ ವ್ಯಾಪ್ತಿಯ 4 ಹಳ್ಳಿಗಳ ಸಾವಿರಾರು ಜನರಿಗೆ ಲಸಿಕೆ ಹಾಕಲಾಯಿತು. ನಾಯಿಗಳ ಉಪಟಳದಿಂದ ಮಕ್ಕಳನ್ನಷ್ಟೇ ಹೊರಬಿಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆ ಮುಂದೆ ಆಟ ಆಡುವ ಮಕ್ಕಳ ಮೇಲೆ ಬೀದಿ ನಾಯಿಗಳು ದಾಳಿ ಮಾಡುತ್ತಿದ್ದು, ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೊಳಪಡುವ ಘಟನೆಗಳು ನಡೆಯುತ್ತಲೇ ಇವೆ.

ಪಾಲಕರು ಮಕ್ಕಳನ್ನು ಬೆಳಿಗ್ಗೆ ಟ್ಯೂಷನ್ ಕ್ಲಾಸ್‌ಗೆ, ಶಾಲೆಗೆ, ಆಟಕ್ಕೆ, ಸೈಕಲ್ ಓಡಿಸಲು, ಅಂಗಡಿಗೆ ಕಳುಹಿಸಲೂ ಹೆದರುತ್ತಿದ್ದಾರೆ. ಅಲ್ಲದೇ ಬೆಳಿಗ್ಗೆ ಹಾಲು, ಪೇಪರ್, ಹೂವು, ಹಣ್ಣು, ತರಕಾರಿ ಮಾರಾಟಗಾರರು, ವಾಯು ವಿಹಾರಿಗಳು ಭಯದಿಂದಲೇ ಕಾರ್ಯ ನಿರ್ವಹಿಸುವ ಪರಿಸ್ಥಿತಿಯಿದೆ. ಬೈಕ್ ಸವಾರರು ಅಪಘಾತಕ್ಕೀಡಾಗುತ್ತಿದ್ದಾರೆ. ನಾಯಿಗಳ ಹಿಂಡು ಕಂಡು ನಾಗರಿಕರು ಬೆಚ್ಚಿ ಬೀಳುತ್ತಿದ್ದಾರೆ. 2/3 ದಿನಗಳ ಹಿಂದೆ ಮುಂಡರಗಿಯಲ್ಲಿ ಮುಗ್ಧ ಮಗುವಿನ ಮೇಲೆ ನಾಯಿ ಬೇಕಾಬಿಟ್ಟು ದಾಳಿ ಮಾಡಿರುವುದು ಗಮನಾರ್ಹ.

ರಸ್ತೆ ಬದಿ, ಜನನಿಬಿಡ ಪ್ರದೇಶ, ಬಸ್-ಆಟೋ ನಿಲ್ದಾಣಗಳ ಪ್ರದೇಶಗಳಲ್ಲಿ ನಾಯಿ ಕೊಡೆಗಳಂತೆ ತಲೆ ಎತ್ತಿರುವ ಚಿಕನ್-ಎಗ್‌ರೈಸ್ ಸೆಂಟರ್, ಬೇಕರಿ, ಮಾಂಸ ಮಾರಾಟದ ಅಂಗಡಿಗಳು, ಗೂಡಂಗಡಿಗಳು, ಹೋಟೆಲ್, ದಾಬಾಗಳು ಅಷ್ಟೇ ಅಲ್ಲದೇ ಸರ್ಕಾರಿ ಶಾಲೆಯವರು ಚೆಲ್ಲುವ ಆಹಾರ-ಪದಾರ್ಥ ಬೀದಿ ನಾಯಿಗಳಿಗೆ ಯಥೇಚ್ಚ ಆಹಾರ ನೀಡುವ ಮೂಲಗಳಾಗಿವೆ. ಇದೀಗ ಮಾಂಸದ ರುಚಿಗೆ ಬೆನ್ನತ್ತಿರುವ ಹತ್ತಿಪ್ಪತ್ತು ಬೀದಿ ನಾಯಿಗಳ ಹಿಂಡು ಹಂದಿ, ಬೆಕ್ಕು, ಕೋಳಿ ಮರಿಗಳನ್ನು ಸಾಲದ್ದಕ್ಕೆ ಜಮೀನಿನಲ್ಲಿ ಜಿಂಕೆ, ನರಿ, ಮೊಲದಂತಹ ಸಣ್ಣ ಪ್ರಾಣಿಗಳನ್ನು ಬೇಟೆಯಾಡುವ ರಾಕ್ಷಸೀ ಪ್ರವೃತ್ತಿಯಿಂದ ಜನತೆ ಬೆಚ್ಚಿ ಬಿದ್ದಿರುವುದು ಸತ್ಯ. ಹತ್ತಿಪ್ಪತ್ತು ನಾಯಿಗಳ ಹಿಂಡು ರೈತರ ಜಮೀನಿನಲ್ಲಿ ಓಡಾಡಿ ಬೆಳೆಯನ್ನೂ ಹಾಳು ಮಾಡುತ್ತಿವೆ.

> ಪಟ್ಟಣದಲ್ಲಿ ಹೆಚ್ಚುತ್ತಿರುವ ಬೀದಿ ನಾಯಿಗಳ ನಿಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಎರಡ್ಮೂರು ದಿನಗಳಲ್ಲಿ ಮಧುರೈ, ತಮಿಳುನಾಡಿನಿಂದ ಪರಿಣಿತ ತಂಡದಿಂದ ನಾಯಿಗಳನ್ನು ಹಿಡಿದು ಸ್ಥಳಾಂತರ ಕಾರ್ಯ ಕೈಗೊಳ್ಳಲಾಗುವುದು. ಸಾರ್ವಜನಿಕರು ತಮ್ಮ ಸಾಕು ನಾಯಿಗಳನ್ನು ಹೊರ ಬಿಡದೇ ನಿಗಾ ವಹಿಸಬೇಕು.
>
> **– ಮಹೇಶ ಹಡಪದ.**
> **ಮುಖ್ಯಾಧಿಕಾರಿ, ಲಕ್ಷ್ಮೇಶ್ವರ ಪುರಸಭೆ.**



# ಅಯ್ಯೋ ಪ್ರಾಬ್ಲಂ ಕಣ್ರೀ...



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಾದ್ಯಂತ 70 ಲಕ್ಷ ರೂ ಅನುದಾನದಲ್ಲಿ ಕೈಗೊಂಡಿರುವ ನೀರಿನ ಪೈಪ್‌ಲೈನ್ ಯೋಜನೆ ಅವೈಜ್ಞಾನಿಕ ಮತ್ತು ಬೇಕಾಬಿಟ್ಟಿ ಕಾಮಗಾರಿಯಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಪೈಪ್‌ಲೈನ್ ಕಾಮಗಾರಿಗಾಗಿ ರಸ್ತೆ ಪಕ್ಕದಲ್ಲಿ ಅಗೆದಿರುವ ತಗ್ಗುಗಳನ್ನು ಅನೇಕ ಕಡೆ ಸರಿಯಾಗಿ ಮುಚ್ಚಿಲ್ಲ.

ಮುಚ್ಚಿದ್ದರೂ ಒಡ್ಡುಗಳಂತಾಗಿ ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ. ಮಳೆ ಬಂದರೆ ಕೆಸರಿನಿಂದ ಸಂಚಾರ ಅಸ್ತವ್ಯಸ್ಥಗೊಳ್ಳುತ್ತಿದೆ. ಪಟ್ಟಣದಲ್ಲಿ ಕೆಲ ವರ್ಷಗಳ ಹಿಂದೆ ನಡೆದ ಒಳಚರಂಡಿ ಕಾಮಗಾರಿ ವೇಳೆ ಅಗೆದ ರಸ್ತೆಗಳ ಸ್ಥಿತಿ ಅಯೋಮಯವಾಗಿದೆ.

ಪೈಪ್‌ಲೈಲ್ ಕಾಮಗಾರಿ ಮಾಡುವ ಗುತ್ತಿಗೆದಾರರು ಅಗೆದ ಸಿಸಿ, ಡಾಂಬರ್ ರಸ್ತೆಗಳನ್ನು ಯಥಾಸ್ಥಿತಿ ದುರಸ್ಥಿ ಮಾಡಬೇಕು. ಆದರೆ ಗುತ್ತಿಗೆದಾರರ ಮೇಲೆ ಅಧಿಕಾರಿಗಳಿಗಾಗಲಿ, ಆಯಾ ವಾರ್ಡ್‌ನ ಸದಸ್ಯರಿಗಾಗಲಿ ನಿಯಂತ್ರಣವೇ ಇಲ್ಲದ್ದರಿಂದ ಗುತ್ತಿಗೆದಾರರು ಆಡಿದ್ದೇ ಆಟವಾಗಿದೆ.

ಮೊದಲೇ ಪಟ್ಟಣದಲ್ಲಿನ ರಸ್ತೆಗಳು ತಗ್ಗುಗುಂಡಿಗಳಿಂದ ಕೂಡಿದ್ದು, ಇದೀಗ ಮತ್ತಷ್ಟು ಹದಗಟ್ಟಿವೆ. ಕೋಟ್ಯಾಂತರ ರೂ ವೆಚ್ಚದ ಯುಜಿಡಿ, ನಗರೋತ್ಥಾನ ಕಾಮಗಾರಿಗಳು ವರ್ಷದಿಂದ ಅರ್ಧಕ್ಕೇ ನಿಂತಿವೆ. ಒಟ್ಟಿನಲ್ಲಿ ಹದಗೆಟ್ಟ ಪರಿಸ್ಥಿತಿಗೆ ಸಾರ್ವಜನಿಕರು, ಜನಪ್ರತಿನಿಧಿಗಳು, ಪುರಸಭೆಗೆ ಹಿಡಿಶಾಪ ಹಾಕುತ್ತಿದ್ದಾರೆ. ಈಗಲಾದರೂ ಅಧಿಕಾರಿಗಳು, ಸದಸ್ಯರು ತಮ್ಮ ಜವಾಬ್ದಾರಿ, ಕರ್ತವ್ಯ ಪ್ರಜ್ಞೆ ನಿಭಾಯಿಸಬೇಕು ಎಂದು ಸ್ಥಳೀಯರಾದ ಮಂಜುನಾಥ ಮಾಗಡಿ ಒತ್ತಾಯಿಸಿದ್ದಾರೆ.

## ನಾಮನಿರ್ದೇಶಿತ ಸದಸ್ಯರನ್ನು ನೇಮಿಸಲು ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯಗಳ ಅಭಿವೃದ್ಧಿ ಅನುಷ್ಠಾನ ಸಮಿತಿಯ ಸರ್ಕಾರ ಜಾರಿಗೆ ತರುವ ಯೋಜನೆಗಳ ಅನುಷ್ಠಾನಕ್ಕೆ ಜಿಲ್ಲಾ ಮಟ್ಟದ ಸಮಿತಿಯಲ್ಲಿ 2 ವರ್ಷಗಳ ಅವಧಿಗೆ ನಾಮ ನಿರ್ದೇಶಿತ ಸದಸ್ಯರನ್ನು ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ. ನಾಮ ನಿರ್ದೇಶಿತ ಸದಸ್ಯರನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತಿದ್ದು, ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯಗಳ ಮುಖಂಡರು ಡಿಸೆಂಬರ್ 17 ರೊಳಗಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ಜಿಲ್ಲಾಡಳಿತ ಭವನ ರೂಮ್ ನಂ:122/1/೦ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯೊಂದಿಗೆ ಫೋಟೋ-2, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ರೇಶನ್ ಕಾರ್ಡ್ ನ್ನು ಲಗತ್ತಿಸಿ ಅರ್ಜಿಗಳನ್ನು ಡಿಸೆಂಬರ್ 17 ರೊಳಗಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ಜಿಲ್ಲಾಡಳಿತ ಭವನ ರೂಮ್ ನಂ:122/1/೦ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರಿಂದ ಅಲ್ಪಸಂಖ್ಯಾತರ ಬಿ.ಎಡ್ ಹಾಗೂ ಡಿ.ಎಡ್ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಡಿಸೆಂಬರ್ 25 ಕೊನೆಯ ದಿನವಾಗಿದ್ದು ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ, ಡಿಸೆಂಬರ್ 26ರಂದು ಸಂಜೆ 4 ಗಂಟೆಯೊಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ರವರ ಕಚೇರಿಗೆ ಸಲ್ಲಿಸಬಹುದಾಗಿದೆ.ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ಅಭ್ಯರ್ಥಿಗಳ ಪೋಷಕರ ವರಮಾನ ರೂ 6.00 ಲಕ್ಷಕ್ಕೆ ಮೀರಿರಬಾರದು. ಅಂಚೆ ತೆರಪು/ಅರೆಕಾಲಿಕ/ದೂರ ಶಿಕ್ಷಣದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ, ಗದಗ ಜಿಲ್ಲಾ ನ್ಯಾಯಾಲಯದ ಎದುರುಗಡೆ, ಗದಗ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.


ಕರ್ನಾಟಕ ಸರಕಾರ

**ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ**

ದಿನಾಂಕ : 10-12-2024

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರ ಸುತ್ತೋಲೆಯಂತೆ

01) ಗದಗ ಜಿಲ್ಲೆಯ 07 ಕೆ.ಪಿ.ಎಸ್ ಶಾಲೆಗಳಿಗೆ ಮಿನಿ ಪಿ.ಸಿ, ಯು.ಪಿ.ಎಸ್, ಲ್ಯಾಪ್‌ಟಾಪ್, ಎಲ್.ಇ.ಡಿ ಪ್ರೋಜೆಕ್ಟರ್ ಹಾಗೂ ಇಂಟರ್ಯಾಕ್ಟಿವ್ ಪೆನಲ್ ಬೋರ್ಡ ಇತ್ಯಾದಿ ಖರೀದಿಗಾಗಿ ಟೆಂಡರ್ ಸಂಖ್ಯೆ : **DPI/2023-24/IND0035/CALL-5** ಕರೆದಿದ್ದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **21/12/2024.**

02) ಗದಗ ಜಿಲ್ಲೆಯ 06 ಬಿ.ಆರ್.ಸಿ ಗಳಿಗೆ ಮಿನಿ ಪಿ.ಸಿ, ಯು.ಪಿ.ಎಸ್, ಲ್ಯಾಪ್‌ಟಾಪ್, ಮತ್ತು ಟ್ಯಾಬ್ ಇತ್ಯಾದಿ ಖರೀದಿಗಾಗಿ ಟೆಂಡರ್ ಸಂಖ್ಯೆ : **DPI/2023-24/IND0058/CALL-2** ಕರೆದಿದ್ದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **21/12/2024.**

ಹೆಚ್ಚಿನ ಮಾಹಿತಿಗಾಗಿ **https://kppp.karnataka.gov.in** ಜಾಲತಾಣ ಸಂಪರ್ಕಿಸುವುದು.

**ಸಹಿ/- ಉಪನಿರ್ದೇಶಕರು (ಅಭಿವೃದ್ಧಿ)**
**ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ**

ವಾಸಾಸಂಇ/ಗದಗ/458/ಕೆ.ಎಸ್.ಎಂ.ಸಿ.ಎ/24-25


### ರಸಪ್ರಶ್ನೆ ಸ್ಪರ್ಧೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪಿಎಸ್‌ಐ ಸೋಮನಗೌಡ ಗೌಡ್ರ ಅಭಿಮತ

# ಜ್ಞಾನದೊಂದಿಗೆ ಸಾಮಾಜಿಕ ಕಳಕಳಿ ಇರಲಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜೀವನದಲ್ಲಿ ಪ್ರತಿಯೊಬ್ಬರೂ ಕಠಿಣ ಅಭ್ಯಾಸ, ನಿರಂತರ ಸಾಧನೆ ಮಾಡುವುದರ ಜೊತೆಗೆ ಅನಗತ್ಯ ಚಟುವಟಿಕೆಗಳಲ್ಲಿ ಭಾಗಿಯಾಗಿ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳದೇ ಸಾಧನೆಯ ಶಿಖರವನ್ನೇರಲು ಪಣತೊಡಬೇಕು ಎಂದು ಗಜೇಂದ್ರಗಡ ಠಾಣೆಯ ಪಿಎಸ್‌ಐ ಸೋಮನಗೌಡ ಗೌಡ್ರ ಹೇಳಿದರು.

ಗಜೇಂದ್ರಗಡ ತಾಲ್ಲಕಿನ ಮ್ಯಾಕಲಝುರಿ ಗ್ರಾಮದ ಮಾರುತೇಶ್ವರ ದೇವಸ್ಥಾನದ ಕಾರ್ತಿಕೋತ್ಸವದ ಅಂಗವಾಗಿ ಸ್ಪರ್ಧಾ ಸಾಮ್ರಾಜ್ಯ ಸ್ಟಡಿ ಸರ್ಕಲ್ ಇವರ ಆಶ್ರಯದಲ್ಲಿ ದೇವಸ್ಥಾನದ ಆವರಣದಲ್ಲಿ ನಡೆದ ರಸಪ್ರಶ್ನೆ ಸ್ಪರ್ಧೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನವನ ಬದುಕಿನಲ್ಲಿ ಸಮಯ ಕೋಟಿ ಕೊಟ್ಟರೂ ಸಿಗದು. ಹೀಗಾಗಿ ವಿವಿಧ ಹುದ್ದೆಗಳಿಗೆ ತಯಾರಿ ನಡೆಸಿರುವ ಅಭ್ಯರ್ಥಿಗಳು ವೇಳೆಗೆ ಬಹಳ ಮಹತ್ವ ನೀಡಬೇಕು. ಅಂದಾಗ ಮಾತ್ರ



ದೇಶ ಮೆಚ್ಚುವಂತಹ ಸಾಧನೆಗೈಯಲು ಸಾಧ್ಯ. ಜೀವನದಲ್ಲಿ ಎಲ್ಲರೂ ಯಶಸ್ಸು ಕಾಣಲು ಕನಸು ಕಾಣುತ್ತಾರೆ, ಅದಕ್ಕೆ ತಕ್ಕುದಾದ ತಯಾರಿ ಮಾಡುವುದಿಲ್ಲ. ಆದ್ದರಿಂದ ಜಾತ್ರೆಗಳಲ್ಲಿ ಮನರಂಜನೆಗೆ ಒತ್ತು ನೀಡದೆ ಜ್ಞಾನಾರ್ಜನೆಗೆ ಮಹತ್ವ ನೀಡಿರುವುದು ಶ್ಲಾಘನೀಯ ಎಂದರು.

ಸ್ಪರ್ಧೆಯಲ್ಲಿ ಕೊಪ್ಪಳ, ಬಾಗಲಕೋಟ, ಗದಗ, ಧಾರವಾಡ ಜಿಲ್ಲೆಯ ವಿವಿಧ ಗ್ರಾಮಗಳಿಂದ ಅನೇಕ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಿದ್ದರು. ಸಂಸ್ಥೆಯ ಸಂಸ್ಥಾಪಕ ವೆಂಕಟೇಶ ಕುಕಬಾಯಿ, ಶರಣಪ್ಪ ಅವಾರಿ, ಸಣ್ಣಹನಮಪ್ಪ ಕುಕಬಾಯಿ, ದುರಗಪ್ಪ ಯ.ತಾತಲ, ಶರಣಪ್ಪ ಕೆ.ತಾತಲ್, ಮಲ್ಲಿಕಾರ್ಜುನ ಅವಾರಿ, ದೇವಪ್ಪ ತಾತಲ್, ಮಂಜುನಾಥ್ ಆಡವಿಭಾವಿ, ಕಳಕಪ್ಪ ಅಂಗಡಿ, ಕಳಕಪ್ಪ ನರಿ, ದುರಾಗನಗೌಡ ಪಾಟೀಲ್, ವೆಂಕಟೇಶ್ ಕಟಿಗಾಲ್, ಪ್ರವೀಣ್ ಕಟಿಗಾಲ್, ಶಿವರಾಜ್ ಬಣ್ಣದ, ರಾಘವೇಂದ್ರ ಅಂಬೋರೆ, ಅಶ್ವಿನಿ ಮಾಮಾದಾಪುರ, ತಿಮ್ಮಣ್ಣ ತಾತಲ್, ಯಮನಪ್ಪ ಕುಕಬಾಯಿ, ಎ.ಕೆ. ಒಂಟಿ, ರಂಗನಾಥ್ ಡೊಳ್ಳಿನ್, ಅಂದಪ್ಪ ಅಂಗಡಿ, ಸಕ್ರಗೌಡ ಪಾಟೀಲ್, ಶಿವಪ್ಪ ಬಣ್ಣದ, ಅರವಿಂದ್ ಬಂಡಿ ಇದ್ದರು.

> ಸಂಸ್ಥೆಯ ಅಧ್ಯಕ್ಷ ಹನಮಂತ ಕುಕಬಾಯಿ ಮಾತನಾಡಿ, ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ. ಎಲ್ಲಾ ಮಕ್ಕಳಲ್ಲಿಯೂ ಪ್ರತಿಭೆ ಇದ್ದೇ ಇರುತ್ತದೆ. ಅದನ್ನು ಹೊರಸೂಸುವಂತೆ ಮಾಡುವ ಗುರುತರ ಜವಾಬ್ದಾರಿಗಾಗಿ ಇಂತಹ ವೇದಿಕೆಯನ್ನು ಕಲ್ಪಿಸಿದ್ದೇವೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka